ಸಂಪುಟ : 9 ಸಂಚಿಕೆ 287 ಪುಟ : 4+2 ಬೆಲೆ: 3.00 ಶುಕ್ರವಾರ ಡಿಸೆಂಬರ್ 27 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 287 Pages : 4+2 Price : 3.00 Friday December 27 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### 1924ರಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನ ಶತಮಾನೋತ್ಸವ

# ವೀರಸೌಧದಲ್ಲಿ ಗಾಂಧೀ ಪ್ರತಿಮೆ ಅನಾವರಣ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ 1924ರಲ್ಲಿ ಜರುಗಿದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಅಂಗವಾಗಿ ನಗರದ ಟಿಳಕವಾಡಿಯಲ್ಲಿನ ವೀರಸೌಧದಲ್ಲಿ ಗುರುವಾರ ಮಹಾತ್ಮ ಗಾಂಧೀಜಿಯವರ ನೂತನ ಪ್ರತಿಮೆಯನ್ನು ರಾಜ್ಯದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅನಾವರಣಗೊಳಿಸಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ತದನಂತರ ವೀರಸೌಧದ ಆವರಣದಲ್ಲಿನ ಗಾಂಧೀ ಸ್ಮಾರಕ ಭವನದಲ್ಲಿನ ನವೀಕೃತ ಪೋಟೋ ಗ್ಯಾಲರಿಯನ್ನು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಉದ್ಘಾಟಿಸಿದರು.





ಇದೇ ವೇಳೆ ವೀರಸೌಧ(ಕಾಂಗ್ರೆಸ್ ಬಾವಿ) ಆವರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಸಿ ನೆಟ್ಟು ನೀರೆರೆದರು.

ಈ ಸಂದರ್ಭದಲ್ಲಿ ಸಚಿವರಾದ ಎಚ್. ಕೆ. ಪಾಟೀಲ, ಎಂ.ಬಿ. ಪಾಟೀಲ, ಎಚ್.ಸಿ. ಮಹದೇವಪ್ಪ, ಲಕ್ಷ್ಮೀ ಹೆಬ್ಬಾಳ್ಕರ್, ಶರಣಬಸಪ್ಪ ದರ್ಶನಾಪುರ, ಕೆ.ಎಚ್. ಮುನಿಯಪ್ಪ, ಶಾಸಕರಾದ ಆಸಿಫ್ (ರಾಜು) ಸೇಠ್, ಪರಿಷತ್ ಸದಸ್ಯ ಚನ್ನರಾಜ್ ಹಟ್ಟಿಹೊಳಿ, ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ, ಮಾಜಿ ಶಾಸಕ ಆರ್.ವಿ. ದೇಶಪಾಂಡೆ, ಸರಕಾರದ ಮುಖ್ಯ ಸಚೇತಕ ಅಶೋಕ ಪಟ್ಟಣ, ಬುಡಾ ಅಧ್ಯಕ್ಷ ಲಕ್ಷ್ಮಣರಾವ ಚಿಂಗಳೆ, ವಾರ್ತಾ ಇಲಾಖೆಯ ಕಾರ್ಯದರ್ಶಿ ಕಾವೇರಿ ಬಿ.ಬಿ., ಆಯುಕ್ತರಾದ ಹೇಮಂತ್ ನಿಂಬಾಳ್ಕರ್, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿ.ಪಂ ಸಿಇಓ ರಾಹುಲ್ ಶಿಂಧೆ, ವಾರ್ತಾ ಇಲಾಖೆಯ ಜಂಟಿ ನಿರ್ದೇಶಕ ಮಂಜುನಾಥ ಡೊಳ್ಳಿನ, ಉಪ ನಿರ್ದೇಶಕ ಗುರುನಾಥ ಕಡಬೂರ ಮತ್ತಿತರರು ಉಪಸ್ಥಿತರಿದ್ದರು.

ಜಗತ್ತಿನ ಗಣ್ಯರಾದ ದಕ್ಷಿಣ ಆಫ್ರಿಕಾದ ನೆಲ್ಸನ್ ಮಂಡೇಲಾ, ನೊಬೆಲ್ ವಿಜೇತರಾದ ರೋಮಾ ರೋಲಾ, ಬರ್ಮಾ ದೇಶದ ಆಂಗ್ ಸಾನ್ ಸೂಕಿ ಅವರು ಬಾಪೂ ಬಗ್ಗೆ ಮಾತನಾಡಿರುವ ಭಾವಚಿತ್ರಗಳು, ಗಾಂಧೀಜಿಯವರನ್ನು ರಾಷ್ಟ್ರಪಿತ ಎಂದು ಕರೆದ ನೇತಾಜಿ ಸುಭಾಸ್ ಚಂದ್ರ ಬೋಸ್ ಹಾಗೂ ಮಹಾತ್ಮ ಗಾಂಧೀಜಿಯವರು ಹರಿಪುರ ಕಾಂಗ್ರೆಸ್ ಅಧಿವೇಶನದಲ್ಲಿ ಒಟ್ಟಿಗೆ ಕುಳಿತಿರುವ ಫೋಟೋ, ಗಾಂಧೀಜಿಯವರನ್ನು ಮಹಾತ್ಮ ಎಂದು ಕರೆದ ರವೀಂದ್ರನಾಥ ಠಾಗೋರ್ ಅವರೊಂದಿಗೆ ಮಹಾತ್ಮ ಗಾಂಧೀಜಿಯವರ ಫೋಟೋ, ಮಹಾತ್ಮ ಗಾಂಧೀ ಹಾಗೂ ಕಸ್ತೂರಬಾ ದಂಪತಿಗಳ ತಾರುಣ್ಯದ ಭಾವಚಿತ್ರಗಳನ್ನು ವೀರ ಸೌಧದಲ್ಲಿ ಕಾಣಬಹುದಾಗಿದೆ.

ಬೆಳಗಾವಿ ಟಿಳಕವಾಡಿಯ ವೀರ ಸೌಧದಲ್ಲಿ ಅಳವಡಿಸಲಾಗಿರುವ ಹೊಸ ಫೋಟೋ ಗ್ಯಾಲರಿಯಲ್ಲಿ ಒಟ್ಟು 40 ಎಲ್ಇಡಿ ಫೋಟೊಗಳಿವೆ. ಇವುಗಳಲ್ಲಿ 1924ರಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ಜರುಗಿದ ಬೆಳಗಾವಿ ಕಾಂಗ್ರೆಸ್ ಅಧಿವೇಶನಕ್ಕೆ ಸಂಬಂಧಿಸಿದ 17 ಭಾವಚಿತ್ರಗಳನ್ನು ಎಲ್ಇಡಿ ಆಧರಿಸಿ ಪ್ರದರ್ಶನಕ್ಕೆ ಸಿದ್ಧಗೊಳಿಸಲಾಗಿದೆ.



1930ರ ಐತಿಹಾಸಿಕ ಉಪ್ಪಿನ ಸತ್ಯಾಗ್ರಹ, ಕುಷ್ಠರೋಗ ಭಯ ಹೋಗಲಾಡಿಸಲು ಪರ್ಚುರೇ ಶಾಸ್ತ್ರೀಗಳಿಗೆ ಚಿಕಿತ್ಸೆ ನೀಡುತ್ತಿರುವ ಬಾಪೂ, 1946ರ ಮುಂಬಯಿ ಕಾಂಗ್ರೆಸ್ ಅಧಿವೇಶನದ ಭಾವಚಿತ್ರ, ಮೋಹನ್‌ದಾಸ್‌ರಿಂದ ಮಹಾತ್ಮವರೆಗೆ ಬೆಳವಣಿಗೆಯ ಪ್ರಮುಖ ಘಟ್ಟಗಳು, ಗಾಂಧೀಜಿಯವರ ಪಾರ್ಥಿವ ಶರೀರದ ಅಂತಿಮ ದರ್ಶನದ ಭಾವಚಿತ್ರ, ಲಂಡನ್ ದುಂಡು ಮೇಜಿನ ಪರಿಷತ್ತಿನಲ್ಲಿ ಭಾಗವಹಿಸಲು ಹೊರಟ ಸಂದರ್ಭದ ಚಿತ್ರಗಳು ಪ್ರದರ್ಶನಗೊಳ್ಳಲಿವೆ.



## ನಾಳೆ ವಿದ್ಯುತ್ ವ್ಯತ್ಯಯ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

110 ಕೆವ್ಹಿ ಶಿರಹಟ್ಟಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಡಿ. 28ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ.

ಸದರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕುಡಿಯುವ ನೀರಿನ ಸ್ಥಾವರಗಳು, ಕೈಗಾರಿಕಾ, ಸೋಲಾರ್ ಐ.ಪಿ.ಪಿ, ಮೆ ಬಿ.ಪಿ.ಸಿ.ಎಲ್ 1 & 2 ಗಾಳಿಯಂತ್ರ ಘಟಕಕ್ಕೆ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ವಿನಂತಿಸಿದೆ.

### ಕೇಂದ್ರ ಸಚಿವ ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಶಿರಹಟ್ಟಿಯಲ್ಲಿ ಬೃಹತ್ ಪ್ರತಿಭಟನೆ

# ಅಮಿತ್ ಶಾ ದೇಶದ ಜನತೆಯ ಕ್ಷಮೆ ಕೇಳಲಿ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಡಾ. ಬಿ.ಆರ್. ಅಂಬೇಡ್ಕರರು ರಚಿಸಿದ ಸಂವಿಧಾನದಿಂದಲೇ ಪ್ರಜಾಪ್ರಭುತ್ವ ಇನ್ನೂ ಗಟ್ಟಿಯಾಗಿದೆ. ಬೇರೆ ದೇಶಗಳಲ್ಲಿ 25 ವರ್ಷಗಳಿಗೆ ಪ್ರಜಾಪ್ರಭುತ್ವ ಬಿದ್ದುಹೋಗಿದೆ. ನಮ್ಮ ದೇಶದಲ್ಲಿ 75 ವರ್ಷಗಳಾದರೂ ಇನ್ನೂ ಗಟ್ಟಿಯಾಗಿರುವುದೇ ಇದಕ್ಕೆ ಸಾಕ್ಷಿ ಎಂದು ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಹೇಳಿದರು.

ಅವರು ಗುರುವಾರ ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಕಮಿಟಿ, ಡಿ.ಕೆ. ಶಿವಕುಮಾರ ಅಭಿಮಾನಿಗಳ ಬಳಗ, ದಲಿತ ಸಂಘಟನೆಗಳು ಮತ್ತು ವಿವಿಧ ಕನ್ನಡಪರ ಸಂಘಟನೆಗಳು ಕೇಂದ್ರ ಗೃಹ ಮಂತ್ರಿ ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯಲ್ಲಿ ಪಾಲ್ಗೊಂಡು ತಹಸೀಲ್ದಾರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿ ಮಾತನಾಡಿದರು.



ಬ್ರಿಟಿಷರು ದೇಶ ಬಿಟ್ಟು ಹೋಗುವ 3 ವರ್ಷದ ಮುನ್ನವೇ ದೇಶಕ್ಕೆ ಯಾವ ಮಾದರಿ ಆಡಳಿತ ಬೇಕು ಎನ್ನುವುದನ್ನು ತೀರ್ಮಾನಿಸಿಕೊಳ್ಳಿ ಎಂದು ದೇಶದ ಜನತೆಗೆ ಹೇಳಿದ್ದರು.

ಗುರುವಾರ ವಿವಿಧ ಸಂಘಟನೆಗಳು ಶಿರಹಟ್ಟಿ ಬಂದ್‌ಗೆ ಕರೆ ನೀಡಿದ್ದವು. ಶ್ರೀ ಜ.ಫಕೀರೇಶ್ವರ ಮಠದಿಂದ ಪ್ರತಿಭಟನೆ ಪ್ರಾರಂಭವಾಗಿ ಪ್ರಮುಖ ವೃತ್ತಗಳಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಘೋಷಣೆ ಕೂಗುತ್ತಾ, ಅವರ ಪ್ರತಿಕೃತಿಯನ್ನು ದಹನ ಮಾಡಲಾಯಿತು. ಮಾರುಕಟ್ಟೆಯಲ್ಲಿ ಸ್ವಯಂಘೋಷಿತವಾಗಿ ಅಂಗಡಿಗಳು ವ್ಯಾಪಾರವನ್ನು ಸ್ಥಗಿತಗೊಳಿಸಿದ್ದವು. ತದನಂತರ ಮಧ್ಯಾಹ್ನದ ಹೊತ್ತಿಗೆ ಪುನಃ ವ್ಯಾಪಾರ ವಹಿವಾಟು ಪ್ರಾರಂಭವಾದವು. ಸಿಪಿಐ ನಾಗರಾಜ ಮಾಢಳ್ಳಿ ಮತ್ತು ಪಿಎಸ್ಐ ಮತ್ತು ಪೋಲೀಸ್ ಸಿಬ್ಬಂದಿ ಅಗತ್ಯ ಬಂದೋಬಸ್ತ್ ಕೈಗೊಂಡಿದ್ದರು.

▶▶3ನೇ ಪುಟಕ್ಕೆ

### ರಾಷ್ಟ್ರ ಮಟ್ಟದಲ್ಲಿ ಚಿನ್ನದ ಪದಕ ಪಡೆದ ಕು. ನಿಖಿಲರಡ್ಡಿ

# ಸೈಕ್ಲಿಂಗ್ ಪಟುವಿಗೆ ಸಚಿವರಿಂದ ಸನ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕ್ರೀಡಾ ವಸತಿ ನಿಲಯದ ವಿದ್ಯಾರ್ಥಿ ನಿಖಿಲರಡ್ಡಿ ನಿಂಗರಡ್ಡಿ ತೇರಿನಗಡ್ಡಿ ಇವರು ಇತ್ತೀಚೆಗೆ ಓಡಿಸ್ಸಾ ರಾಜ್ಯದ ಪುರಿಯಲ್ಲಿ ನಡೆದ 29ನೇ ರಾಷ್ಟ್ರೀಯ ರೋಡ್ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನ ಟೀಮ್ ಟೈಮ್ ಟ್ರಾಯಲ್ ಸ್ಪರ್ಧೆಯಲ್ಲಿ ಭಾಗವಹಿಸಿ ಚಿನ್ನದ ಪದಕ ಪಡೆದಿದ್ದಾರೆ.

ರಾಜ್ಯ ಮಟ್ಟದ 3ನೇ ಮಿನಿ ಒಲಂಪಿಕ್ ರೋಡ್ ಸೈಕ್ಲಿಂಗ್ 10 ಕಿಮೀ ಟಿ.ಟಿ. ಕ್ರೀಡಾಕೂಟದಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದು ಚಿನ್ನದ ಪದಕ, ರಾಷ್ಟ್ರ ಮಟ್ಟದ 29ನೇ ರೋಡ್ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನಲ್ಲಿ 20 ಕಿ.ಮೀ ಟೀಮ್ ಟೈಮ್ ಟ್ರಾಯಲ್ ಕ್ರೀಡಾಕೂಟದಲ್ಲಿ ಭಾಗವಹಿಸಿ ಚಿನ್ನದ ಪದಕ ಪಡೆದಿದ್ದಲ್ಲದೆ, ಡಿ. 28, 29ರಂದು ಬೆಂಗಳೂರಿನಲ್ಲಿ ಜರುಗುವ ರಾಜ್ಯಮಟ್ಟದ ಎಂ.ಟಿ.ಬಿ. ಸೈಕ್ಲಿಂಗ್ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ವಿಜಯಪುರದಲ್ಲಿ ನಡೆಯಲಿರುವ ರಾಜ್ಯಮಟ್ಟದ ಸ್ಕೂಲ್ ಗೇಮ್ಸ್ ರೋಡ್ ಸೈಕ್ಲಿಂಗ್ ಮತ್ತು ಟ್ರ್ಯಾಕ್ ಸೈಕ್ಲಿಂಗ್ ಸ್ಪರ್ಧೆಗೆ ಆಯ್ಕೆಯಾಗಿ ನಿಖಿಲರಡ್ಡಿ ನಿಂಗರಡ್ಡಿ ತೇರಿನಗಡ್ಡಿ ಗದಗ ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ಸಾಧಕ ವಿದ್ಯಾರ್ಥಿ ಹಾಗೂ ತರಬೇತುದಾರರಾದ ನಿಂಗರಡ್ಡಿ ತೇರಿನಗಡ್ಡಿ ಇವರಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್. ಕೆ. ಪಾಟೀಲ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಹಾಗೂ ಕ್ರೀಡಾ ಇಲಾಖೆಯ ಎಲ್ಲಾ ತರಬೇತುದಾರರು ಅಭಿನಂದನೆ ಸಲ್ಲಿಸಿದ್ದಾರೆ.



ನಿಖಿಲರಡ್ಡಿ ಬೆಂಗಳೂರಿನಲ್ಲಿ ನಡೆದ ಮಿನಿ ಒಲಂಪಿಕ್ ರೋಡ್ ಸೈಕ್ಲಿಂಗ್ ಸ್ಪರ್ಧೆ ಇಂಡಿವಿಜುವಲ್ ಟೈಮ್ ಟ್ರಾಯಲ್‌ನಲ್ಲಿಯೂ ಚಿನ್ನದ ಪದಕ ಹಾಗೂ ರೋಡ್ ರೇಸ್ ಸ್ಪರ್ಧೆಯಲ್ಲಿ ಬೆಳ್ಳಿ ಪದಕ ಪಡೆದಿದ್ದಾರೆ. ರಾಜ್ಯ ಮಟ್ಟದ 15ನೇ ರೋಡ್ ಸೈಕ್ಲಿಂಗ್ ಚಾಂಪಿಯನ್‌ಶಿಪ್‌ನಲ್ಲಿ 15 ಕಿ.ಮೀ ಇಂಡಿವಿಜುವಲ್ ಟೈಮ್ ಟ್ರಾಯಲ್ಸ್‌ನಲ್ಲಿ ಭಾಗವಹಿಸಿ ಕಂಚಿನ ಪದಕ ಗಳಿಸಿದ್ದಾರೆ.

### ಕೇಂದ್ರ ಸಚಿವ ಅಮಿತ್ ಶಾ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಸ್ಲಂ ಸಮಿತಿಯಿಂದ ಪ್ರತಿಭಟನೆ

# ಅಮಿತ್ ಶಾರನ್ನು ಸಂಪುಟದಿಂದ ವಜಾಗೊಳಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಸಂಸತ್ತಿನ ಚಳಿಗಾಲದ ಅಧಿವೇಶನ ಸಂದರ್ಭದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವಹೇಳನಕಾರಿಯಾಗಿ ಮಾತನಾಡಿದ್ದು, ಕೊಡಲೇ ಸಂವಿಧಾನ ವಿರೋಧಿ ಅಮಿತ್ ಶಾರನ್ನು ಸಚಿವ ಸಂಪುಟದಿಂದ ಕೈಬಿಟ್ಟು ಗಡಿಪಾರು ಮಾಡಬೇಕೆಂದು ಆಗ್ರಹಿಸಿ ಸ್ಲಂ ಜನಾಂದೋಲನ–ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ಗಾಂಧಿ ಸರ್ಕಲ್‌ನಲ್ಲಿ ಪ್ರತಿಭಟನೆ ನಡೆಸಿ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ವೆಂಕಟೇಶಯ್ಯ ಮಾತನಾಡಿ, ಅಂಬೇಡ್ಕರ್ ಅವರು ಹಲವು ಧರ್ಮ, ಭಾಷೆ, ಸಂಸ್ಕೃತಿ–ಸಂಪ್ರದಾಯಗಳನ್ನು ಒಳಗೊಂಡಿರುವ ಭಾರತದಂತಹ ದೇಶವನ್ನು ಸಂವಿಧಾನದ ಮೂಲಕ ವಿವಿಧತೆಯಲ್ಲಿ ಏಕತೆ ಮೂಡಿಸಿ ಸರ್ವ ಭಾರತೀಯರನ್ನು ಒಂದುಗೂಡಿಸಿದವರು.




ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಮಾತನಾಡಿ, ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ಅಸಮಾನತೆಯನ್ನು ಹೋಗಲಾಡಿಸಿ ಸಮ ಸಮಾಜ ನಿರ್ಮಾಣಕ್ಕೆ ಶ್ರಮಿಸಿದವರು. ಅಂತಹ ಮಹಾನ್ ನಾಯಕನ ಬಗ್ಗೆ ಮಾತನಾಡುವ ಮೂಲಕ ಅಮಿತ್ ಶಾ ಈ ದೇಶಕ್ಕೆ ಮತ್ತು ನಮ್ಮ ದೇಶದ ಸಂವಿಧಾನಕ್ಕೆ ಅಪಚಾರ ಎಸಗಿದ್ದಾರೆ. ಕೂಡಲೇ ಅವರನ್ನು ಕೇಂದ್ರ ಸಚಿವ ಸಂಪುಟದಿಂದ ಕೈಬಿಡಬೇಕು ಎಂದರು ಆಗ್ರಹಿಸಿದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅಂಬೇಡ್ಕರ್ ಅವರಿಗೆ ಅಪಮಾನ ಮಾಡಿದ್ದು, ಕೂಡಲೇ ರಾಷ್ಟ್ರಪತಿಗಳು ಇಂತಹ ಸಂವಿಧಾನ ವಿರೋಧಿಗಳನ್ನು ಸಂಪುಟದಿಂದ ವಜಾಗೊಳಿಸಿ ಗಡಿಪಾರು ಮಾಡಬೇಕೆಂದು ಆಗ್ರಹಿಸಿದರು.

ಪ್ರಗತಿಪರ ಚಿಂತಕರಾದ ಬಸವರಾಜ ಪೂಜಾರ, ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ರವಿಕುಮಾರ ಬೆಳಮಕರ, ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಸ್ಲಂ ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಮೆಹಬೂಬಸಾಬ ಬಳ್ಳಾರಿ, ಮಂಜುನಾಥ ಶ್ರೀಗಿರಿ, ಮೆಹರುನಿಸಾ ಡಂಬಳ, ದುರ್ಗಪ್ಪ ಮಣ್ಣವಡರ, ಖಾಜಾಸಾಬ ಇಸ್ಮಾಯಿಲನವರ, ಮುನ್ನಾ ಅಗಡಿ, ಖಾಜಾಸಾಬ ಬಳ್ಳಾರಿ, ಶಂಕ್ರಪ್ಪ ಪೂಜಾರ, ಜಂದಿಸಾಬ ಬಳ್ಳಾರಿ, ಮಕ್ತುಮಸಾಬ ಮುಲ್ಲಾನವರ, ಸಾಕ್ರುಬಾಯಿ ಗೋಸಾವಿ, ದಾದು ಗೋಸಾವಿ ಮುಂತಾದವರಿದ್ದರು.

## ಸಂಪಾದಕೀಯ

### ಮಹಾ ಅಧಿವೇಶನದಲ್ಲಿ ಮೈತ್ರಿಕೂಟದ ಚರ್ಚೆಯಾಗಲಿ

ದೇಶದಲ್ಲಿ ಕರ್ನಾಟಕ ಹೊರತುಪಡಿಸಿ ಇನ್ನಿತರ ರಾಜ್ಯಗಳಲ್ಲಿ ನಡೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ನಿರೀಕ್ಷಿತ ಸ್ಥಾನಗಳನ್ನು ಗಳಿಸಿಲ್ಲ. ಇಂಡಿಯಾ ಮೈತ್ರಿಕೂಟದ ರಚನೆಯಾಗಿ ಎದುರಿಸಿದ ಚುನಾವಣೆಯಲ್ಲೂ ಕಾಂಗ್ರೆಸ್ ಸಾಧನೆ ಬಗ್ಗೆ ಪರ ವಿರೋಧ ಚರ್ಚೆಗಳು ಆರಂಭವಾಗಿದ್ದವು. ಮೈತ್ರಿಕೂಟದಿಂದಾಗಿಯೇ ಕಡಿಮೆ ಸ್ಥಾನ ಬರಲು ಕಾರಣ ಎಂದು ಮೈತ್ರಿಕೂಟದ ಪಕ್ಷಗಳು ಆರೋಪವಾಗಿತ್ತು.

ಇದೆಲ್ಲದರ ಮಧ್ಯೆ ತೃಣಮೂಲ ಕಾಂಗ್ರೆಸ್ ನಾಯಕಿ ಮಮತಾ ಬ್ಯಾನರ್ಜಿ ಇಂಡಿಯಾ ಮೈತ್ರಿಕೂಟದ ಸಾರಥ್ಯ ವಹಿಸುವುದಾಗಿ ನೀಡಿದ ಹೇಳಿಕೆ ಮೈತ್ರಿಕೂಟದಲ್ಲಿ ಬಿರುಕು ಮೂಡಲು ಕಾರಣವಾಯಿತು. ಮೈತ್ರಿಕೂಟದ ಬಗ್ಗೆ ಆರಂಭದಿಂದಲೂ ಒಂದಲ್ಲ ಒಂದು ರೀತಿಯಲ್ಲಿ ಅಪಸ್ವರ ಎತ್ತುತ್ತಲೆ ಬಂದಿರುವ ಮಮತಾ ಬ್ಯಾನರ್ಜಿ, ಮೈತ್ರಿಕೂಟದ ಸಾರಥ್ಯ ವಿಷಯ ರಾಜಕೀಯ ಸಂಚಲನಕ್ಕೆ ಕಾರಣವಾಯಿತು.

ಮಮತಾ ಬ್ಯಾನರ್ಜಿ ನಂತರ ಆಮ್ ಆದ್ಮಿ ಪಾರ್ಟಿಯೂ ಕಾಂಗ್ರೆಸ್ ಪಕ್ಷವನ್ನು ಇಂಡಿಯಾ ಮೈತ್ರಿಕೂಟದಿಂದ ಹೊರಹಾಕಿ ಎನ್ನುವ ಹಕ್ಕೊತ್ತಾಯ ಮಾಡಿರುವುದು ಮೈತ್ರಿಕೂಟದಲ್ಲಿ ಬಿರುಕು ಮೂಡಲು ಕಾರಣವಾಗಿದೆ. ಅದರಲ್ಲೂ ಮಹಾತ್ಮ ಗಾಂಧೀಜಿ ಎಐಸಿಸಿ ಅಧ್ಯಕ್ಷರಾಗಿ ನಡೆಸಿದ ಮಹಾ ಅಧಿವೇಶನ ಸಂದರ್ಭದಲ್ಲಿ ಆಮ್ ಆದ್ಮಿ ಪಾರ್ಟಿ ಇಂಥದ್ದೊಂದು ಒತ್ತಾಯ ಆರಂಭಿಸಿರುವುದು ಕಾಂಗ್ರೆಸ್ ಪಾಲಿಗೂ ಬಿಸಿ ತುಪ್ಪವಾಗಿ ಪರಿಣಮಿಸಿದೆ.

ಒಂದು ಕಡೆ ಇಂಡಿಯಾ ಮೈತ್ರಿಕೂಟ ನಿರೀಕ್ಷಿತ ಫಲಿತಾಂಶ ನೀಡುತ್ತಿಲ್ಲ. ಚುನಾವಣೆ ಬಂದಾಗಷ್ಟೆ ಮೈತ್ರಿಕೂಟ ನೆನಪಾಗಿ, ಸ್ಥಾನ ಹಂಚಿಕೆ ಮಾಡಿಕೊಳ್ಳುವುದೇ ಮೈತ್ರಿಕೂಟದ ಉದ್ದೇಶ ಎನ್ನುವಂತಾಗಿದೆ. ಇನ್ನೊಂದೆಡೆ ಮಿತ್ರಪಕ್ಷಗಳಲ್ಲಿಯೇ ದೊಡ್ಡದಾದ ಕಾಂಗ್ರೆಸ್ ಸಹಜವಾಗಿ ಮೈತ್ರಿಕೂಟದ ಮೇಲೆ ಹಿಡಿತ ಸಾಧಿಸುವ ಕೆಲಸ ಮಾಡುತ್ತಿರುವುದಕ್ಕೆ ಇನ್ನಿತರ ಪಕ್ಷಗಳಲ್ಲಿ ಅಸಮಾಧಾನ ಮೂಡಿರುವ ಸಾಧ್ಯತೆಗಳಿವೆ.

ಆಮ್ ಆದ್ಮಿ ಪಾರ್ಟಿ ಹೇಳಿಕೆಗಳು ಮತ್ತು ಮಮತಾ ಬ್ಯಾನರ್ಜಿ ಮಾತುಗಳನ್ನು ಕಾಂಗ್ರೆಸ್ ಗಂಭೀರವಾಗಿ ಪರಿಗಣಿಸಬೇಕಿದೆ. ಎಐಸಿಸಿ ಮಹಾ ಅಧಿವೇಶನದಲ್ಲಿ ಮೈತ್ರಿಕೂಟ ಬಲಗೊಳ್ಳುವ ಬಗ್ಗೆ ಚರ್ಚೆಗಳಾಗಬೇಕಿವೆ. ದೇಶದ ನಾನಾ ಭಾಗಗಳಿಂದ ಆಗಮಿಸಿರುವ ಕಾಂಗ್ರೆಸ್ ನಾಯಕರು, ಗಾಂಧಿ ಸ್ಮರಣೆ ಜೊತೆಗೆ ಮೈತ್ರಿಕೂಟ ಗಟ್ಟಿಗೊಳಿಸುವ ಬಗ್ಗೆ ಚಿಂತನ-ಮಂಥನ ನಡೆಸುವಂತಾದರೆ ಮಾತ್ರ ರಾಷ್ಟ್ರಮಟ್ಟದಲ್ಲಿ ಅಧಿಕಾರ ರಾಜಕಾರಣದ ಸಮೀಪ ಹೋಗಲು ಸಾಧ್ಯ.

## ಡಿ.29ರಂದು ವಿಶ್ವ ಮಾನವ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ರಾಷ್ಟ್ರಕವಿ ಕುವೆಂಪು ಜನ್ಮದಿನದ ನಿಮಿತ್ತ ವಿಶ್ವ ಮಾನವ ದಿನಾಚರಣೆ 2024 ನ್ನು ಡಿಸೆಂಬರ್ 29 ರಂದು ಬೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕರಾದ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ ಆಗಮಿಸುವರು. ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸ್ವಾಗತ ಕೋರಿದ್ದಾರೆ.

**ಸರ್ಕಾರಿ ದುಡ್ಡಲ್ಲಿ ಕಾಂಗ್ರೆಸ್ ಅಧಿವೇಶನ ನಡೆಸುವುದು ಎಷ್ಟು ಸರಿ: ಬಸವರಾಜ ಬೊಮ್ಮಾಯಿ**

## ಅಸಲಿ ಗಾಂಧಿ ಹೆಸರಲ್ಲಿ ನಕಲಿ ಕಾಂಗ್ರೆಸ್ ಅಧಿವೇಶನ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಮಹಾತ್ಮ ಗಾಂಧಿ ಕಾಂಗ್ರೆಸ್‌ಗೂ ಇಂದಿನ ಕಾಂಗ್ರೆಸ್ ಗೂ ಬಹಳ ವ್ಯತ್ಯಾಸ ಇದೆ. ಅಸಲಿ ಕಾಂಗ್ರೆಸ್‌ಗೂ ನಕಲಿ ಕಾಂಗ್ರೆಸ್ ಗೂ ವ್ಯತ್ಯಾಸ ಇದೆ. ಮಹಾತ್ಮ ಗಾಂಧೀಜಿಯವರ ತದ್ವಿರುದ್ಧವಾಗಿ ಈಗಿನ ಕಾಂಗ್ರೆಸ್‌ನವರು ನಡೆದುಕೊಳ್ಳುತ್ತಿದಾರೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾನೂನು ರೀತಿ ಆಡಳಿತವೇ ಇಲ್ಲ. ಎಲ್ಲಾ ಇಲಾಖೆಗಳು, ನಿಗಮಗಳಲ್ಲಿ ಭ್ರಷ್ಟಾಚಾರ ನಡೆದಿದೆ. ದೀನ ದಲಿತರ ಅನುದಾನದಲ್ಲೇ ಭ್ರಷ್ಟಾಚಾರ ಮಾಡಿದ್ದಾರೆ. ಗಾಂಧಿಯವರ ಸ್ವರಾಜ್ಯಕ್ಕೆ ತದ್ವಿರುದ್ದವಾಗಿ ನಡೆದುಕೊಳ್ಳುತ್ತಿದ್ದಾರೆ. ಕಾಂಗ್ರೆಸ್ ಅಧಿವೇಶನಕ್ಕೆ ಸರ್ಕಾರದ ಹಣ ಬಳಸುತ್ತಿರುವುದು ಎಷ್ಟು ಸರಿ? ಇದು ಯಾವ ಕಾನೂನಿನಲ್ಲಿದೆ? ರಾಜಕೀಯ ಸಮ್ಮೇಳನಗಳಿಗೆ ಸರ್ಕಾರದ ಹಣ ಬಳಸುವುದು ಎಷ್ಟರ ಮಟ್ಟಿಗೆ ಸರಿ? ಗಾಂಧೀಜಿಯವರನ್ನು ಮುಂದಿಟ್ಟುಕೊಂಡು ತಮ್ಮ ಬ್ಯಾನರ್ ಹಾಕಿಕೊಂಡು ಅಧಿವೇಶನ ಮಾಡುತ್ತಿದ್ದಾರೆ. ಅಸಲಿ ಗಾಂಧಿ ಹೆಸರಲ್ಲಿ ನಕಲಿ ಕಾಂಗ್ರೆಸ್ ಅಧಿವೇಶನ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

### ಸಿಟಿ ರವಿ ದೂರಿಗೆ ಕ್ರಮವಿಲ್ಲ

ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿಗೆ ಧರ್ಮಸ್ಥಳಕ್ಕೆ ಬರಲಿ ಎಂಬ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸವಾಲು ಹಾಕಿರುವ ವಿಚಾರದ ಕುರಿತು ಕೇಳಿದ ಪ್ರಶ್ನೆಗೆ ಅದು ಅವರವರಿಗೆ ಬಿಟ್ಟಿದ್ದು, ದೇವರು ನಂಬಿಕೆ ಅವರವರ ವೈಯಕ್ತಿಕ ವಿಚಾರ. ಸಿ.ಟಿ ರವಿ ಹಾಗೂ ಲಕ್ಷ್ಮೀ ಹೆಬ್ಬಾಳ್ಕರ್ ಇಬ್ಬರೂ ದೂರು ಕೊಟ್ಟಿದ್ದಾರೆ. ಒಂದು ಕಡೆ ಕಂಪ್ಲೀಟ್ ಗೆ ಕೂಡಲೇ ಕ್ರಮ ಕೈಗೊಳ್ಳುತ್ತಾರೆ. ಆದರೆ, ಸಿ.ಟಿ ರವಿ ದೂರು ಕೊಟ್ಟಿರುವುದನ್ನು ಎಫ್ ಐ ಆರ್ ಮಾಡೇ ಇಲ್ಲ. ಹೈಕೋರ್ಟ್ ಮದ್ಯಪ್ರವೇಶ ಮಾಡದಿದ್ದರೆ ಸಿ.ಟಿ ರವಿ ಅವರ ಪರಿಸ್ಥಿತಿ ಏನು ಆಗ್ತಿತ್ತೋ ಗೊತ್ತಿಲ್ಲ ಎಂದರು.

ಕಲ್ಯಾಣ ಚಾಲುಕ್ಯರ ಮಾಂಡಲೀಕನಾಗಿದ್ದ ಶೋಭನರಸ ಗದಗನ್ನು ರಾಜಧಾನಿ ಮಾಡಿಕೊಂಡು, ರಂಗನವಾಡಾದಲ್ಲಿ ಅರಮನೆ ಕಟ್ಟಿಕೊಂಡು ಕ್ರಿ.ಶ.1002ರಿಂದ 1008ರವರೆಗೆ ಆಳ್ವಿಕೆ ಮಾಡಿದ ಬೆಳವಲ-300, ಪುಲಿಗೆರೆ-300, ಕುಕ್ಕನೂರ-30, ಕುಂದೂರ-1000 ಈ ಪ್ರಕಾರ ಅವನ ಪ್ರದೇಶ ವ್ಯಾಪ್ತಿಯಿತ್ತು. ಇವನು ಕ್ರಿ.ಶ.1002ರಲ್ಲಿ ಕಲ್ಲಿನ ಕರ್ದುಗೆ ಕೋಟೆ ನಿರ್ಮಿಸಿದ ಕೋಟೆಯ ಒಳಗೆ ಸ್ವಯಂಭೂ ಈಶ್ವರ ಹಾಗೂ ಸ್ವಯಂಭೂ ತ್ರಿಕೂಟೇಶ್ವರ ದೇವಸ್ಥಾನಗಳನ್ನು ಮೊದಲಿಗೆ ನಿರ್ಮಿಸಿದ. ಅಲ್ಲದೇ ವ್ಯಾಖ್ಯಾನ ಶಾಲೆಯನ್ನು ಕಟ್ಟಿಸಿ, ಕನ್ನಡ ಹಾಗೂ ಪ್ರಾಕೃತ ಬೋಧನೆಗಾಗಿ ಹೂಲಿಯಿಂದ ಕಾಳಜ್ಞಾನಿ ವಕ್ಕಾಣಜಿಯನ್ನು ಕರೆ ತಂದ. ಈ ಎಲ್ಲ ಕಟ್ಟಡಗಳು ಇಂದಿಗೂ ಸುಸ್ಥಿತಿಯಲ್ಲಿವೆ.

**ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಹಿನ್ನೆಲೆ | 'ಅಸ್ಮಿತೆ' ವ್ಯಾಪಾರ ಮೇಳಕ್ಕೆ ಚಾಲನೆ**

# ಆಕರ್ಷಿಸುತ್ತಿದೆ ಸರಸ್ ಮೇಳ, ಖಾದಿ ಉತ್ಸವ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಅಧ್ಯಕ್ಷತೆಯಲ್ಲಿ ಬೆಳಗಾವಿಯಲ್ಲಿ 1924ರಲ್ಲಿ ನಡೆದ ಕಾಂಗ್ರೆಸ್ ಅಧಿವೇಶನನದ ಶತಮಾನೋತ್ಸವ ಆಚರಣೆ ಹಿನ್ನೆಲೆಯಲ್ಲಿ ಬೆಳಗಾವಿ ನಗರದಲ್ಲಿ ವಿಶೇಷವಾಗಿ ರೂಪಿಸಿರುವ ಸರಸ್ ಮೇಳ ಮತ್ತು ಖಾದಿ ಉತ್ಸವ, ವಸ್ತುಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗುರುವಾರ ವಿದ್ಯುಕ್ತ ಚಾಲನೆ ನೀಡಿದರು.

ಬೆಳಿಗ್ಗೆ ನಗರದ ಟಿಳಕವಾಡಿಯಲ್ಲಿನ ವೀರಸೌಧದ ಕಾರ್ಯಕ್ರಮದಲ್ಲಿ ಭಾಗಿಯಾಗಿ ಬಳಿಕ ನೇರವಾಗಿ ಸರ್ದಾರ್ ಹೈಸ್ಕೂಲ್ ಮೈದಾನಕ್ಕೆ ಆಗಮಿಸಿದ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳನ್ನು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಹಾಗೂ ಇನ್ನಿತರ ಗಣ್ಯರು ಆತ್ಮೀಯವಾಗಿ ಬರಮಾಡಿಕೊಂಡರು.



ಶತಮಾನೋತ್ಸವ ಸಮಿತಿಯ ಅಧ್ಯಕ್ಷರು ಹಾಗೂ ಸಚಿವರಾದ ಎಚ್.ಕೆ. ಪಾಟೀಲ್, ಸಚಿವರಾದ ಡಾ. ಹೆಚ್.ಸಿ. ಮಹಾದೇವಪ್ಪ, ಕೆ.ಎಚ್. ಮುನಿಯಪ್ಪ, ಲಕ್ಷ್ಮೀ ಹೆಬ್ಬಾಳ್ಕರ್, ಎಂ.ಬಿ. ಪಾಟೀಲ, ಡಾ. ಎಂ.ಸಿ. ಸುಧಾಕರ, ದಿನೇಶ್ ಗುಂಡೂರಾವ್, ಭೈರತಿ ಸುರೇಶ, ಶಾಸಕರಾದ ಆರ್.ವಿ. ದೇಶಪಾಂಡೆ, ದೆಹಲಿಯ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ, ಮಾಜಿ ಮುಖ್ಯಮಂತ್ರಿ ಎಂ.ವೀರಪ್ಪ ಮೊಯ್ಲಿ ಸೇರಿದಂತೆ ಹಲವಾರು ಗಣ್ಯರೊಂದಿಗೆ ಮುಖ್ಯಮಂತ್ರಿಗಳು ಹಾಗೂ ಉಪಮುಖ್ಯಮಂತ್ರಿಗಳು ಬೆಳಗಾವಿ ನಗರದಲ್ಲಿ ಸ್ವ-ಸಹಾಯ ಗುಂಪಿನ ಮಹಿಳೆಯರ ಉತ್ಪನ್ನಗಳು ಹಾಗೂ ಖಾದಿ ಉತ್ಪನ್ನಗಳ 'ಅಸ್ಮಿತೆ' ವ್ಯಾಪಾರ ಮೇಳ-2024ನ್ನು ಉದ್ಘಾಟಿಸಿದರು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ ಮತ್ತು ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಮತ್ತು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಾನಗರ ಪಾಲಿಕೆ ಸಹಭಾಗಿತ್ವದಲ್ಲಿ ಈ ಉತ್ಸವವು ಆರಂಭವಾಗಿದ್ದು, ಡಿ.26ರಿಂದ ಜನವರಿ 4ರವರೆಗೆ ನಡೆಯಲಿದೆ.

### ಉತ್ಪನ್ನಗಳಿಗೆ ಮಾರುಕಟ್ಟೆ

ರಾಜ್ಯದಲ್ಲಿ ಮಹಿಳೆಯರು ಉತ್ಪನ್ನಗಳ ಮಾರಾಟಕ್ಕೆ ಪ್ರತಿಯೊಂದು ಹಳ್ಳಿ, ಸಂತೆ, ತಾಲೂಕು ಮಟ್ಟದಲ್ಲಿ ಮಾಸಿಕ ಸಂತೆ, ಜಿಲ್ಲಾ ವಸ್ತು ಪ್ರದರ್ಶನ ಮಾರಾಟ ಮೇಳ ಏರ್ಪಡಿಸುವುದಷ್ಟೇ ಅಲ್ಲದೆ ಇತರೆ ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ನಡೆಯುವ ಮೇಳಗಳಿಗೆ ರಾಜ್ಯದ ಮಹಿಳೆಯರನ್ನು ನಿಯೋಜನೆ ಮಾಡುವ ಮೂಲಕ ಅವರ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಬೆಳಗಾವಿಯಲ್ಲಿ ಕಳೆದ 3 ವರ್ಷದಿಂದ ಬೃಹತ್ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಆಯೋಜಿಸಿದಂತೆ ಈ ವರ್ಷವೂ ಸಹ ಮೇಳ ಆಯೋಜಿಸಲಾಗಿದೆ ಎಂದು ರಾಷ್ಟ್ರೀಯ ಜೀವನೋಪಾಯ ಅಭಿಯಾನದ ನಿರ್ದೇಶಕಿ ಪಿ.ಐ. ವಿದ್ಯಾ ತಿಳಿಸಿದರು.

### ನಿತ್ಯ ಸಾಂಸ್ಕೃತಿಕ ಕಾರ್ಯಕ್ರಮ

ಪ್ರತಿ ದಿನ ಸಂಜೆ 6.30ರಿಂದ 9 ಗಂಟೆಯವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಬೆಳಗಾವಿಯಲ್ಲಿ ಸತತ 4ನೇ ವರ್ಷವೂ ಆಯೋಜಿಸಲಾಗುತ್ತಿರುವ ಈ ಮೇಳದಲ್ಲಿ ಪ್ರಮುಖವಾಗಿ ನಗರ ಹಾಗೂ ಗ್ರಾಮೀಣ ಸ್ವ-ಸಹಾಯ ಗುಂಪಿನ ಮಹಿಳೆಯರು ಉತ್ಪಾದಿಸುವ ಉತ್ಪನ್ನಗಳನ್ನು ಮಾರಾಟ ಮಾಡುವುದು ವಿಶೇಷತೆಯಾಗಿದೆ. ಸರ್ಕಾರವು 2024-25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿ 50 'ಅಕ್ಕ ಕೆಫೆ'ಗಳನ್ನು ಒಂದೇ ವಿನ್ಯಾಸದಡಿ ಅನುಷ್ಠಾನಗೊಳಿಸಲಾಗುತ್ತಿದೆ. ಈ ಕಾರ್ಯಕ್ರಮದಡಿ ಅಂದಾಜು 1200 ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ಜೀವನೋಪಾಯಕ್ಕೆ ಅನುಕೂಲ ಕಲ್ಪಿಸಲಾಗುತ್ತಿದೆ.

### ವಿಶೇಷ ಅಭಿಯಾನ

ರಾಜ್ಯದಲ್ಲಿ ಅಭಿಯಾನದಡಿ 2.79 ಲಕ್ಷ ಸ್ವ-ಸಹಾಯ ಗುಂಪುಗಳಡಿ 29.66 ಲಕ್ಷ ಕುಟುಂಬಗಳನ್ನು ಗ್ರಾಮೀಣ ಹಾಗೂ ನಗರ ಜೀವನೋಪಾಯ ಅಭಿಯಾನದಲ್ಲಿ ಹಾಗೂ 45 ಸಾವಿರ ಸ್ವ-ಸಹಾಯ ಗುಂಪುಗಳಡಿ 4.50 ಲಕ್ಷ ಕುಟುಂಬಗಳನ್ನು ಗ್ರಾಮೀಣ ಹಾಗೂ ನಗರ ಜೀವನೋಪಾಯ ಅಭಿಯಾನದಡಿ ಸಂಘಟಿಸಲಾಗಿದ್ದು, ಪ್ರತಿಯೊಬ್ಬ ಮಹಿಳೆಯೂ ಸ್ವಾವಲಂಬನೆಯ ಬದುಕಿನೊಂದಿಗೆ ತನ್ನ ಕುಟುಂಬದ ಅಭಿವೃದ್ಧಿಗೆ ಪೂರಕ ಸೇವೆಗಳನ್ನು ಪಡೆಯುವಲ್ಲಿ ಪೂರಕ ವ್ಯವಸ್ಥೆಗಳನ್ನು ಕಲ್ಪಿಸಲಾಗುತ್ತಿದೆ.













**ಅವ್ವ ಸೇವಾ ಪ್ರತಿಷ್ಠಾನದ ಉದ್ಘಾಟನೆ, ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಶ್ರೀ ಪ್ರಭುಲಿಂಗ ದೇವರು**

# ತಂದೆ-ತಾಯಿ ಕಣ್ಣಿಗೆ ಕಾಣುವ ದೇವರು

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಹೆತ್ತ ತಂದೆ-ತಾಯಿಗಳು ಕಣ್ಣಿಗೆ ಕಾಣುವ ನಿಜವಾದ ದೇವರುಗಳು ಎಂದು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಹೇಳಿದರು.

ಅವರು ಪಟ್ಟಣದ ಶಿಕ್ಷಕ ಮಂಜುನಾಥ ಮಟ್ಟಿ ಇವರ ಮಾತೋಶ್ರೀ ದಿ. ಸಾವಂತ್ರವ್ವ ಬಸವಂತಪ್ಪ ಮಟ್ಟಿ ಇವರ ಸ್ಮರಣಾರ್ಥ ಬಾಲಲೀಲಾ ಮಾಹಾಂತ ಶಿವಯೋಗಿಗಳ ಗವಿಮಠದಲ್ಲಿ ಅವ್ವ ಸೇವಾ ಪ್ರತಿಷ್ಠಾನ ಉದ್ಘಾಟನೆ, ಸಾಧಕರಿಗೆ ಸನ್ಮಾನ ಹಾಗೂ ಉಡದಟ್ಟಿ(ನಾರಿದಟ್ಟಿ) ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಒಂಬತ್ತು ತಿಂಗಳು ಹೊತ್ತು ಹೆತ್ತ ತಾಯಿ, ಕುಟುಂಬದ ಆಧಾರ ಸ್ತಂಭವಾಗಿ ನಿಲ್ಲುವ ತಂದೆ ಕಣ್ಣಿಗೆ ಕಾಣುವ ನಿಜವಾದ ದೇವರುಗಳು. ತಮ್ಮ ಕಷ್ಟಗಳು ಮಕ್ಕಳಿಗೆ ಕಾಣದಂತೆ ಬಡತನದಲ್ಲಿಯೂ ಸಾಕಿ ಸಲುಹಿ, ಶಿಕ್ಷಣ ನೀಡಿ ಉತ್ತಮ ಪ್ರಜೆಗಳನ್ನಾಗಿ ಮಾಡಿದ ತಂದೆ-ತಾಯಿಗಳ ಋಣವನ್ನು ತೀರಿಸಿದರೆ ಬದುಕು ಸಾರ್ಥಕವಾಗುತ್ತದೆ. ಈ ನಿಟ್ಟಿನಲ್ಲಿ ಶಿಕ್ಷಕ ಮಂಜುನಾಥ ಮಟ್ಟಿ ತಮ್ಮ ತಾಯಿಯ ಸ್ಮರಣಾರ್ಥ ಅವ್ವ ಸೇವಾ ಪ್ರತಿಷ್ಠಾನ ಸ್ಥಾಪಿಸುವ ಮೂಲಕ ಮಾದರಿಯಾಗಿದ್ದಾರೆ. ಸಮಾಜದಲ್ಲಿ ತಂದೆ-ತಾಯಿಗಳ ಮಹತ್ವ ಸಾರಿ ಶಿಕ್ಷಕ ಮಂಜುನಾಥ ಮಟ್ಟಿ ಸಾರ್ಥಕ ಬದುಕು ಕಟ್ಟಿಕೊಂಡಿದ್ದಾರೆ. ಪ್ರತಿಯೊಬ್ಬರೂ ತಂದೆ-ತಾಯಿಗಳನ್ನು ಗೌರವದಿಂದ ಕಾಣಬೇಕು. ಇದರಿಂದ ಸುಂದರ ಸಮಾಜ ನಿರ್ಮಿಸಲು ಸಹಕಾರಿಯಾಗುತ್ತದೆ ಎಂದರು.



ಯಲಬುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಶೇಖರಗೌಡ ಪಾಟೀಲ್ ಮಾತನಾಡಿ, ತಂದೆ- ತಾಯಿಗಳನ್ನು ದೇವರಂತೆ ಪೂಜಿಸಿದರೆ ನಮ್ಮ ಬಾಳು ಬಂಗಾರವಾಗುತ್ತದೆ. ಮುಪ್ಪಿನ ಕಾಲದಲ್ಲಿ ಪ್ರತಿಯೊಬ್ಬರೂ ತಂದೆ-ತಾಯಿಗಳಿಗೆ ಆಸರೆಯಾಗಬೇಕು. ತಂದೆ-ತಾಯಿಗಳು ಎಂದಿಗೂ ಮಕ್ಕಳಿಗೆ ಒಳಿತನ್ನು ಬಯಸುತ್ತಾರೆ. ಅಂತೆಯೇ ನಾವು ಅವರನ್ನು ಸಾಕಿ ಸಲುಹಿದಾಗ ತಂದೆ-ತಾಯಿಗಳಿಗೆ ಜೀವನ ಸಾರ್ಥಕ ಎನ್ನಿಸುತ್ತದೆ. ಈ ನಿಟ್ಟಿನಲ್ಲಿ ಮಂಜುನಾಥ ಮಟ್ಟಿಯವರು ಅವ್ವ ಸೇವಾ ಪ್ರತಿಷ್ಠಾನದ ಮೂಲಕ ತಾಯಿಯ ಋಣವನ್ನು ತೀರಿಸಿ, ಸಮಾಜದಲ್ಲಿ ತಾಯಿಗೆ ಗೌರವ ಸಲ್ಲಿಸುತ್ತಿರುವುದು ಶ್ಲಾಘನೀಯ ಕಾರ್ಯವಾಗಿದೆ ಎಂದರು.

ಅಧ್ಯಕ್ಷತೆಯುನ್ನು ಅವ್ವ ಸೇವಾ ಪ್ರತಿಷ್ಠಾನದ ಅಧ್ಯಕ್ಷ ಬಸವಂತಪ್ಪ ಮಟ್ಟಿ ವಹಿಸಿದ್ದರು. ಗೌರವ್ವಾ ಬಡ್ನಿ ಕಾರ್ಯಕ್ರಮ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಮಾಹಾದೇವಪ್ಪ ಬಟ್ಟೂರ, ಡಾ. ಎಸ್.ಸಿ. ಚವಡಿ, ಬಸವರಾಜ ಬಿಂಗಿ, ಷಣ್ಮುಖಪ್ಪ ಬಡ್ನಿ, ಯಲಬುರ್ಗ ಬಿಇಓ ಸೋಮಶೇಖರಗೌಡ ಪಾಟೀಲ, ತಿಮ್ಮಣ್ಣ ಚವಡಿ, ಚಂದ್ರಶೇಖರಯ್ಯ ಹಿರೇಮಠ, ಬಿ.ಕೆ. ಹರಪನಹಳ್ಳಿ, ಪಿ.ಎ. ವಂಟಕರ, ಮಂಗಳಾ ನೀಲಗುಂದ, ಪ್ರತಿಭಾ ಬಡ್ನಿ, ಮಹೇಶ ಸಬರದ, ಸಿದ್ದಲಿಂಗಪ್ಪ ಶ್ಯಾಗೋಟಿ, ಡಾ. ಜಯಕುಮಾರ ಬ್ಯಾಳಿ, ಶಿವಕುಮಾರ್ ಎನ್.ಎಲ್, ಗುರುರಾಜ ನರಗುಂದ, ಹನುಮರೆಡ್ಡಿ ಭೀಮರೆಡ್ಡಿ, ವೀರೇಶ ಕುರಿ, ಸಂತೋಷ ಮಳ್ಳಿ ಇದ್ದರು.

ಡಾ. ಎಸ್.ಸಿ. ಚವಡಿ ಮಾತನಾಡಿ, ಅವ್ವ ಸೇವಾ ಪ್ರತಿಷ್ಠಾನದ ಮೂಲಕ ತಾಯಿಯ ಸ್ಮರಣಾರ್ಥ ಸಮಾಜದಲ್ಲಿ ಸಾಧನೆಗೈದ ಮಹನೀಯರನ್ನು ಗುರುತಿಸಿ, ಸನ್ಮಾನಿಸಿ, ಗೌರವಿಸಿರುವ ಕಾರ್ಯ ಶ್ಲಾಘನೀಯವಾಗಿದೆ. ತಂದೆ-ತಾಯಿಗಳನ್ನು ಗೌರವಿಸಿ ಕಾಪಾಡಿಕೊಳ್ಳುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದರು. ಡಾ. ಎಸ್.ಸಿ. ಚವಡಿ ಮಾತನಾಡಿ, ಅವ್ವ ಸೇವಾ ಪ್ರತಿಷ್ಠಾನದ ಮೂಲಕ ತಾಯಿಯ ಸ್ಮರಣಾರ್ಥ ಸಮಾಜದಲ್ಲಿ ಸಾಧನೆಗೈದ ಮಹನೀಯರನ್ನು ಗುರುತಿಸಿ, ಸನ್ಮಾನಿಸಿ, ಗೌರವಿಸಿರುವ ಕಾರ್ಯ ಶ್ಲಾಘನೀಯವಾಗಿದೆ. ತಂದೆ-ತಾಯಿಗಳನ್ನು ಗೌರವಿಸಿ ಕಾಪಾಡಿಕೊಳ್ಳುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದರು.

# ಅಮಿತ್ ಶಾ ದೇಶದ ಜನತೆಯ ಕ್ಷಮೆ ಕೇಳಲಿ

▶▶ ಮೊದಲನೇ ಪುಟದಿಂದ

ಅಯ್ಯರ್ ಎಂಬ ಕೊಂಕಣಿ ಪಂಡಿತರು ಡಾ. ಬಿ.ಆರ್. ಅಂಬೇಡ್ಕರ ಅವರಿಂದ ಮಾತ್ರ ದೇಶದ ಸಂವಿಧಾನ ರಚಿಸಲು ಸಾಧ್ಯ ಎಂದು ಹೇಳಿದ್ದರು. ಆ ಪ್ರಯುಕ್ತ ಇಡೀ ಜಗತ್ತಿನಲ್ಲಿಯೇ ಅತ್ಯಂತ ಶಕ್ತಿಯುತ ಮತ್ತು ಗಟ್ಟಿಯಾದ ಸಂವಿಧಾನ ನಮ್ಮದಾಗಿದೆ. ಇಂತಹ ಸಂವಿಧಾನ ರಚಿಸಿದವರ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾತನಾಡಿರುವುದು ಸರಿಯಲ್ಲ. ಈ ಕೂಡಲೇ ಇಂತಹ ಹೇಳಿಕೆಗಳನ್ನು ನೀಡುವದನ್ನು ನಿಲ್ಲಿಸಬೇಕೆಂದು ಹೇಳಿದರು.

ಕೆಪಿಸಿಸಿ ಪ್ರ.ಕಾರ್ಯದರ್ಶಿ ಸುಜಾತಾ ದೊಡ್ಡಮನಿ ಮಾತನಾಡಿ, ಬಿಜೆಪಿಯವರಿಗೆ ಮತಿಭ್ರಮಣೆಯಾದಂತಿದೆ. ಸಂವಿಧಾನ ಬದಲಾವಣೆ ಮಾಡುವುದಾಗಿ ಅಲ್ಲಲ್ಲಿ ಮಾತುಗಳು ಕೇಳಿ ಬರುತ್ತಿತ್ತು. ಇದೀಗ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಬಾಯಲ್ಲಿ ಅಂತಹ ಮಾತುಗಳು ಬರುತ್ತಿವೆ. ಇದೀಗ ಕೇವಲ ಶೇ.25 ಮಾತ್ರ ಹೋರಾಟ ನಡೆಯುತ್ತಿದ್ದು, ಇನ್ನೂ ಶೇ. 75ರಷ್ಟು ಜನತೆ ಹೋರಾಟದಲ್ಲಿ ಭಾಗಿಯಾಗಿಲ್ಲ. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಪಕ್ಷದ ಜಿಲ್ಲಾಧ್ಯಕ್ಷ ಜಿ.ಎಸ್. ಪಾಟೀಲರು ನಮಗೆ ಈಗಾಗಲೇ ನಿರ್ದೇಶನ ನೀಡಿದ್ದು, ಈ ಬಗ್ಗೆ ಪ್ರತಿ ಗ್ರಾಮದಲ್ಲಿಯೂ ಹೋರಾಟ ಮಾಡಬೇಕೆಂದು ತಿಳಿಸಿದ್ದಾರೆ. ಆದ್ದರಿಂದ ಕೇಂದ್ರ ಸಚಿವ ಅಮಿತ್ ಶಾ ಈ ಕೂಡಲೇ ದೇಶದ ಜನತೆಯ ಕ್ಷಮೆ ಯಾಚಿಸಬೇಕು ಎಂದರು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹುಮಾಯೂನ್ ಮಾಗಡಿ, ಮುಖಂಡರಾದ ಡಿ.ಕೆ. ಹೊನ್ನಪ್ಪನವರ, ಮಂಜುನಾಥ ಘಂಟಿ, ಮುತ್ತುರಾಜ ಭಾವಿಮನಿ ಮಾತನಾಡಿದರು.

ಪ.ಪಂ ಅಧ್ಯಕ್ಷೆ ದೇವಕ್ಕ ಗುಡಿಮನಿ, ದೇವಪ್ಪ ಲಮಾಣಿ, ಪಕ್ಷದ ವಕ್ತಾರೆ ಭಾಗ್ಯಶ್ರೀ ಬಾಬಣ್ಣ, ಹೊನ್ನಪ್ಪ ಶಿರಹಟ್ಟಿ, ಹಮೀದ ಸನದಿ, ಅಶ್ರತ ಢಾಲಾಯತ, ದೇವಪ್ಪ ಆಡೂರ, ಸುರೇಶ ಬೀರಣ್ಣವರ, ಮಹೇಂದ್ರ ಉಡಚಣ್ಣವರ, ಈರಣ್ಣ ಚವ್ಹಾಣ, ಆನಂದ ಕೋಳಿ, ದೇವೇಂದ್ರ ಶಿಂಧೆ, ಮಾಬುಸಾಬ ಲಕ್ಷ್ಮೇಶ್ವರ, ಅಲ್ಲಾಭಕ್ಷಿ ನಗಾರಿ, ಮಹಾಂತೇಶ ದಶಮನಿ, ನಜೀರ ಡಂಬಳ, ಅನಿಲ ಮಾನೆ, ಬುಡನಶ್ಯಾ ಮಕಾನದಾರ ಮುಂತಾದವರು ಉಪಸ್ಥಿತರಿದ್ದರು.

---

**ರೋಟರಿ ಕ್ಲಬ್‌ನಿಂದ ಆರೋಗ್ಯ ಜಾಗೃತಿ, ಬಿಸಿಯೂಟದ ತಟ್ಟೆಗಳ ವಿತರಣೆ**

# ಸಮುದಾಯದಿಂದ ಸರ್ಕಾರಿ ಶಾಲೆಗಳ ಸಬಲೀಕರಣ

■ ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಶಾಲೆಗಳು ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯ ಜೊತೆಗೆ ಶಿಸ್ತು, ನೈತಿಕತೆ ಹಾಗೂ ವೈಯುಕ್ತಿಕ ಬೆಳವಣಿಗೆಗೂ ಒತ್ತು ನೀಡುತ್ತಿವೆ. ಸಮುದಾಯದ ಸಹಕಾರವು ಸರಕಾರಿ ಶಾಲೆಗಳ ಸಬಲೀಕರಣದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ್ ಹೇಳಿದರು.

ಅವರು ಗುರುವಾರ ಗದಗ-ಬೆಟಗೇರಿ ರೋಟರಿ ಕ್ಲಬ್‌ನಿಂದ ಗದಗ ರಂಗನವಾಡಿಯ ಸರಕಾರಿ ಶಾಲೆ ನಂ. 11ರಲ್ಲಿ ಜರುಗಿದ ಮಕ್ಕಳ ಆರೋಗ್ಯ ಜಾಗೃತಿ ಹಾಗೂ ಶಾಲೆಗೆ ಬಿಸಿಯೂಟದ ತಟ್ಟೆಗಳ ವಿತರಣಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಬಿಸಿಯೂಟವು ಪರಿಣಾಮಕಾರಿ ಹಾಗೂ ಉಪಯುಕ್ತ ಯೋಜನೆಯಾಗಿದೆ. ಮಕ್ಕಳಲ್ಲಿಯ ಅಪೌಷ್ಠಿಕತೆ ತಡೆದು ಆರೋಗ್ಯ ವೃದ್ಧಿ ಮಾಡುತ್ತದೆ. ಇದರಿಂದಾಗಿ ಶೈಕ್ಷಣಿಕ ವ್ಯಾಸಂಗಕ್ಕೆ ಪೂರಕ ವಾತಾವರಣದ ನಿರ್ಮಾಣವಾಗಿದೆ. ಗದಗ-ಬೆಟಗೇರಿ ರೋಟರಿ ಕ್ಲಬ್ ಮಕ್ಕಳಿಗೆ ಊಟಕ್ಕಾಗಿ ತಟ್ಟೆಗಳನ್ನು ಕೊಡುಗೆಯಾಗಿ ನೀಡಿದ್ದು, ಕ್ಲಬ್‌ನ ಕಾರ್ಯ ಪ್ರಶಂಸನೀಯ ಎಂದರು.



ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ರೇವಣಸಿದ್ದೇಶ್ವರ ಉಪ್ಪಿನ ಮಾತನಾಡಿ, ಉತ್ತಮ ಆರೋಗ್ಯ ಮನುಷ್ಯನ ಸದೃಢತೆಯನ್ನು ಹೆಚ್ಚಿಸುತ್ತದೆ. ಮಕ್ಕಳು ಸರಿಯಾದ ಕ್ರಮದಲ್ಲಿ ಎರಡು ಹೊತ್ತು ಹಲ್ಲುಜ್ಜುವದು, ಪೌಷ್ಠಿಕ ಆಹಾರ ಸೇವನೆ, ವ್ಯಾಯಾಮಗಳಿಂದ ಆರೋಗ್ಯವನ್ನು ವೃದ್ಧಿಸಿಕೊಳ್ಳಬೇಕು. ಜೊತೆಗೆ ಓದು-ಬರಹದಲ್ಲಿ ದೃಢತೆಯಿಂದ ಮುನ್ನಡೆಯಬೇಕು ಎಂದರು.

ರೋಟರಿ ವೇಲ್ಫೇರ್ ಸೊಸೈಟಿಯ ಅಧ್ಯಕ್ಷ ಶ್ರೀಧರ ಸುಲ್ತಾನಪೂರ ಮಾತನಾಡಿ, ಸರಕಾರಿ ಶಾಲೆಗಳ ಉಳಿವಿಗಾಗಿ ಸಮುದಾಯವು ಪಾಲ್ಗೊಳ್ಳಬೇಕಾಗಿದೆ. ಪೋಷಕರು ತಮ್ಮ ಮನಸ್ಥಿತಿಯನ್ನು ಬದಲಾಯಿಸಿ ಇತ್ತ ಒಲವು ತೋರಬೇಕು. ಜೊತೆಗೆ ಸಮಾಜವು ನಮ್ಮ ಜವಾಬ್ದಾರಿಯನ್ನು ಅರಿತು ಶಾಲೆಗಳ ಅಭಿವೃದ್ಧಿಗಾಗಿ ಕೈ ಜೋಡಿಸಬೇಕು. ಗದಗ-ಬೆಟಗೇರಿ ರೋಟರಿ ಕ್ಲಬ್ ಸರಕಾರಿ ಶಾಲೆಗಳ ಸಬಲೀಕರಣಕ್ಕೆ ಕೈ ಜೋಡಿಸಿದೆ ಎಂದರು.

> ಕ್ಷೇತ್ರ ಸಮನ್ವಯ ಅಧಿಕಾರಿ ಎಸ್.ಪಿ. ಪ್ರಭಯ್ಯನಮಠ ಮಾತನಾಡಿ, ಸರಕಾರಿ ಶಾಲೆಗಳಲ್ಲಿ ಮಕ್ಕಳ ಮೌಲ್ಯಗಳ ಬೆಳವಣಿಗೆ, ಆತ್ಮವಿಶ್ವಾಸ, ನಾಯಕತ್ವ, ಕಷ್ಟ ಸಹಿಷ್ಣುತೆ, ಬಡತನ-ಸಿರಿತನ ಇವುಗಳ ನೈಜ ಬದುಕಿನ ಅನುಭವದೊಂದಿಗೆ ಜೀವನ ಶಿಕ್ಷಣವು ಬೆಳೆದು ಬರುತ್ತದೆ. ಹೀಗಾಗಿ ಸರಕಾರಿ ಶಾಲೆಗಳು ಮಕ್ಕಳ ಅಭಿವೃದ್ಧಿಯ ಸಂಕೇತಗಳಾಗಿವೆ ಎಂದರು.

ವೇದಿಕೆಯ ಮೇಲೆ ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಎಂ.ಆರ್. ಕರಮುಡಿ, ಕ್ಲಬ್‌ನ ಕಾರ್ಯದರ್ಶಿ ಸಂತೋಷ ಅಕ್ಕಿ, ಮಾಜಿ ಅಧ್ಯಕ್ಷ ಬಾಲಕೃಷ್ಣ ಕಾಮತ ಉಪಸ್ಥಿತರಿದ್ದರು. ಐಮನ್ ಕೊಪ್ಪಳ ಹಾಗೂ ಸಫೀನಾ ಸರಗಿ ಪ್ರಾರ್ಥಿಸಿದರು. ರಾಧಿಕಾ ಮಡಿವಾಳರ ವಚನ ಪ್ರಾರ್ಥನೆ ಮಾಡಿದಳು. ಮುಖ್ಯೋಪಾಧ್ಯಾಯೆ ಭಾರತಿ ಕುಲಕರ್ಣಿ ಸ್ವಾಗತಿಸಿದರು. ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಆರ್.ಬಿ. ಹೊಸಮನಿ ನಿರೂಪಿಸಿದರು. ಎಂ.ವೈ. ಕೊಳ್ಳಿಯವರ ವಂದಿಸಿದರು.

ಗದಗ-ಬೆಟಗೇರಿ ರೋಟರಿ ಕ್ಲಬ್‌ನಿಂದ 60 ಊಟದ ಸ್ಟೀಲ್ ತಟ್ಟೆಗಳನ್ನು ಶಾಲೆಗೆ ಕೊಡುಗೆಯಾಗಿ ನೀಡಲಾಯಿತು. ಶಾಲೆಯ ವತಿಯಿಂದ ಅತಿಥಿ ಗಣ್ಯರನ್ನು ಸನ್ಮಾನಿಸಲಾಯಿತು.

---

# ಮೇವಿನ ಬಣವೆಗೆ ಬೆಂಕಿ, ನಷ್ಟ



■ ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಜಿ.ದಾದಾಪುರ ಗ್ರಾಮದ ರೈತರೊಬ್ಬರ ಮೇವಿನ ಬಣವೆಗೆ ಆಕಸ್ಮಿಕವಾಗಿ ಬೆಂಕಿ ತಗುಲಿ ಅಪಾರ ಹಾನಿಯಾಗಿರುವ ಘಟನೆ ನಡೆದಿದೆ.

ಗ್ರಾಮದ ಮಸಲವಾಡದ ನಾಗರಾಜ ಎಂಬ ರೈತನಿಗೆ ಸೇರಿದ ಕಣದಲ್ಲಿ ಜಾನುವಾರುಗಳಿಗಾಗಿ ಸಂಗ್ರಹಿಸಿಟ್ಟಿದ್ದ ಮೇವಿನ ಬಣವೆಗೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್‌ನಿಂದ ಬೆಂಕಿ ತಗುಲಿದೆ. ಇದನ್ನು ಕಂಡ ಸ್ಥಳೀಯರು ಬೆಂಕಿ ನಂದಿಸಲು ಪ್ರಯತ್ನಿಸಿ, ಬೆಂಕಿ ನಿಯಂತ್ರಣಕ್ಕೆ ಬರದಿದ್ದಾಗ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸಿದ್ದಾರೆ. ದನಕರುಗಳಿಗಾಗಿ ಕಣದಲ್ಲಿ ಸಂಗ್ರಹಿಸಿಟ್ಟಿದ್ದ 5 ಟ್ರ್ಯಾಕ್ಟರ್ ಶೇಂಗಾ ಹೊಟ್ಟು, 3 ಎಕರೆಯ ಮೆಕ್ಕೆಜೋಳದ ಸಿಪ್ಪೆ, ತೊಗರಿ ಹೊಟ್ಟು ಬೆಂಕಿಗೆ ಸಂಪೂರ್ಣ ಸುಟ್ಟುಹೋಗಿದ್ದು, ಲಕ್ಷಾಂತರ ರೂ ನಷ್ಟ ಉಂಟಾಗಿದೆ ಎಂದು ರೈತ ನಾಗರಾಜ ಅಳಲು ತೋಡಿಕೊಂಡಿದ್ದಾರೆ.

---

**ಬಿಸಿಎ 2ನೇ ಸೆಮಿಸ್ಟರ್ ಫಲಿತಾಂಶ ಶೇ 87.096 ದಾಖಲು**

# ಸರ್ಕಾರಿ ಬಿಸಿಎ ಕಾಲೇಜಿಗೆ ಉತ್ತಮ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮದರ್ಜೆ ಮಹಾವಿದ್ಯಾಲಯದ ಬ್ಯಾಚುಲರ್ ಆಫ್ ಕಂಪ್ಯೂಟರ್ ಅಪ್ಲಿಕೇಷನ್ (ಬಿಸಿಎ) ವಿಭಾಗದ 2ನೇ ಸೆಮಿಸ್ಟರ್ ವಿದ್ಯಾರ್ಥಿಗಳು 87.096ರಷ್ಟು ಉತ್ತಮ ಫಲಿತಾಂಶ ದಾಖಲಿಸಿದ್ದಾರೆ.

ಪರೀಕ್ಷೆಗೆ ಹಾಜರಾಗಿದ್ದ 31 ವಿದ್ಯಾರ್ಥಿಗಳಲ್ಲಿ ಕೇವಲ 4 ವಿದ್ಯಾರ್ಥಿಗಳು ಮಾತ್ರ ಫೇಲ್ ಆಗಿದ್ದು ಶೇ 87.096ರಷ್ಟು ಫಲಿತಾಂಶ ದಾಖಲಾಗಿದೆ. ಇದರಲ್ಲಿ ಅಂಕಿತಾ ಬೆನಹಾಳ 750ಕ್ಕೆ 647 ಅಂಕಗಳನ್ನು ಪಡೆದು ಪ್ರಥಮ, ವೈಷ್ಣವಿ ಪಾಟೀಲ 645 ಅಂಕಗಳನ್ನು ಪಡೆದು ದ್ವಿತೀಯ, ಲಕ್ಷ್ಮೀದೇವಿ ದೊಡ್ಡಮನಿ 644 ಅಂಕಗಳನ್ನು ಪಡೆದು ತೃತೀಯ, ಅನು ಮಂಡ್ರೆ ಮತ್ತು ಸಹನಾ ಕವಡಿಮಟ್ಟಿ 641 ಅಂಕಗಳನ್ನು ಪಡೆದು ಚತುರ್ಥ ಸ್ಥಾನಗಳನ್ನು ಪಡೆದಿದ್ದಾರೆ. ಒಟ್ಟು ಹತ್ತು ವಿದ್ಯಾರ್ಥಿಗಳು 600ಕ್ಕೂ ಹೆಚ್ಚು ಅಂಕಗಳನ್ನು ಪಡೆದಿದ್ದಾರೆ.



ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಅಡಿಯಲ್ಲಿ ಬರುವ ಗ್ರಾಮೀಣ ಭಾಗದ ಕಾಲೇಜಿನಲ್ಲಿ ಅತ್ಯಂತ ಉತ್ಸುಕತೆಯಿಂದ ಓದುವ ಮೂಲಕ ಬಿಸಿಎ 2ನೇ ಸೆಮಿಸ್ಟರ್‌ನಲ್ಲಿ ಉತ್ತಮ ಫಲಿತಾಂಶ ನೀಡಿದ ವಿದ್ಯಾರ್ಥಿಗಳಿಗೆ ಕಾಲೇಜಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಭಿನಂದಸಲಾಯಿತು.

ಈ ವೇಳೆ ಮಾತನಾಡಿದ ಕಾಲೇಜಿನ ಪ್ರಾಂಶುಪಾಲ ಎಸ್.ಎಲ್. ಗುಳೆದಗುಡ್ಡ, ಗದಗ ಜಿಲ್ಲೆಯಲ್ಲಿ ಬಿಸಿಎ ಕೋರ್ಸ್ ಹೊಂದಿರುವ ಏಕೈಕ ಸರ್ಕಾರಿ ಪದವಿ ಕಾಲೇಜು ಎಂಬ ಹೆಗ್ಗಳಿಕೆಯನ್ನು ಪಡೆದಿದೆ. ಅಲ್ಲದೆ ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಪರಿಷತ್‌ನಿಂದ (ಎಐಸಿಟಿಇ) ಮಾನ್ಯತೆ ಪಡೆದಿದೆ ಎಂದರು.

ಈ ವೇಳೆ ಬಿಸಿಎ ವಿಭಾಗದ ಎಚ್‌ಒಡಿ ಶಶಿಕಲಾ ವಿ.ಎಸ್, ವಿರುಪಾಕ್ಷಪ್ಪ ಸಂಗನಾಳ, ಬಸವರಾಜ ಮಡಿವಾಳರ, ಚಂದ್ರು ಎಂ.ರಾಥೋಡ್ ಇದ್ದರು.

---

# ಜೆ.ಟಿ. ಮಹಾವಿದ್ಯಾಲಯದಲ್ಲಿ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಅರ್ಥಶಾಸ್ತ್ರ ವಿಷಯದಲ್ಲಿ ಗಣಿತಶಾಸ್ತ್ರ ಮತ್ತು ಸಂಖ್ಯಾಶಾಸ್ತ್ರದ ಬಳಕೆ ದಿನದಿಂದ ದಿನಕ್ಕೆ ಅಗತ್ಯವಾಗುತ್ತಿರುವ ಸಂದರ್ಭದಲ್ಲಿ ಅವುಗಳ ಅರಿವು ಮತ್ತು ಪ್ರಾಯೋಗಿಕ ವಿಧಾನಗಳ ಕೌಶಲ್ಯವನ್ನು ಅರ್ಥಶಾಸ್ತ್ರ ವಿದ್ಯಾರ್ಥಿಗಳು ಹೊಂದುವುದು ಬಹಳ ಮುಖ್ಯ ಎಂದು ಡಾ. ಹುಸೈನ್ ನದಾಫ್ ಅಭಿಪ್ರಾಯಪಟ್ಟರು.

ಅವರು ಕೆ.ಎಲ್.ಇ ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯದ ಅರ್ಥಶಾಸ್ತ್ರ ವಿಭಾಗ ಆಯೋಜಿಸಿದ್ದ 'ಅರ್ಥಶಾಸ್ತ್ರದಲ್ಲಿ ಗಣಿತಶಾಸ್ತ್ರದ ಅನ್ವಯಿಕೆಗಳು' ಕುರಿತು ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಒಂದು ದಿನದ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿದರು.



ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಡಾ. ಪಿ.ಜಿ. ಪಾಟೀಲ್, ಅರ್ಥಶಾಸ್ತ್ರವು ಅಂತಾರಾಷ್ಟ್ರೀಯ ಮಟ್ಟದ ಗಮನಾರ್ಹ ವಿಷಯವಾಗಿದ್ದು, ಈ ವಿಷಯ ಕೇವಲ ಅರ್ಥಶಾಸ್ತ್ರ ವಿದ್ಯಾರ್ಥಿಗಳಿಗೆ ಮಾತ್ರ ಸೀಮಿತವಲ್ಲ. ಇತರೆ ಅಧ್ಯಯನ ಶಿಸ್ತಿನ ವಿಭಾಗಗಳ ವಿದ್ಯಾರ್ಥಿಗಳಿಗೂ ಅರ್ಥಶಾಸ್ತ್ರದ ತಿಳುವಳಿಕೆ ಅಗತ್ಯ ಮತ್ತು ಅನಿವಾರ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ನಾಗರಾಜ್ ಓಬಯ್ಯ ಮತ್ತು ಐ.ಕ್ಯೂ.ಎ.ಸಿ. ಸಂಯೋಜಕರಾದ ಡಾ. ಜಿ.ಕೆ. ರಮೇಶ್ ಉಪಸ್ಥಿತರಿದ್ದರು.

ಅಧ್ಯಾಪಕ ಡಾ. ಕಿರಣ್ ಸೂಡಿ ಅತಿಥಿಗಳನ್ನು ಸ್ವಾಗತಿಸಿದರು. ಅನ್ನಪೂರ್ಣ ಪ್ರಾರ್ಥಿಸಿದರು. ವಿದ್ಯಾರ್ಥಿ ರವಿ ಪೂಜಾರ್ ಅತಿಥಿಗಳ ಪರಿಚಯ ಮಾಡಿಕೊಟ್ಟರು. ಗೀತಾ ಕಾರ್ಯಕ್ರಮ ನಿರೂಪಿಸಿದರು, ಮೋಹನ್ ಪಲ್ಲೇದ ವಂದಿಸಿದರು.

---

# ಬಿವಿವಿ ಶಾಲೆಯ ಸ್ನೇಹ ಸಮ್ಮೇಳನ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯ 39ನೇ ವಾರ್ಷಿಕ ಸ್ನೇಹ ಸಮ್ಮೇಳನವು ಡಿ. 27ರಂದು ಜರಗಲಿದೆ. ಪೂರ್ವ ಪ್ರಾಥಮಿಕ ಮತ್ತು ಕಿರಿಯ ಪ್ರಾಥಮಿಕ ವಿದ್ಯಾರ್ಥಿಗಳ ಕಾರ್ಯಕ್ರಮವು ಮುಂಜಾನೆ 9.30 ಗಂಟೆಗೆ ಜರಗುವುದು ಹಾಗೂ ಪ್ರಾಥಮಿಕ ಮತ್ತು ಪ್ರೌಢಶಾಲೆಯ ವಿದ್ಯಾರ್ಥಿಗಳ ವಾರ್ಷಿಕೋತ್ಸವು ಸಾಯಂಕಾಲ 4.30ಕ್ಕೆ ಸಂಭಾಪೂರ ರಸ್ತೆಯಲ್ಲಿರುವ ಶಾಲಾ ಆವರಣದಲ್ಲಿ ನಡೆಯಲಿದೆ. ಮುಂಜಾನೆಯ ಸಮಾರಂಭದ ಮುಖ್ಯ ಅತಿಥಿಗಳಾಗಿ ಗದುಗಿನ ಹೆಸರಾಂತ ವೈದ್ಯರಾದ ಡಾ. ಪ್ರಕಾಶ ಸಂಕನೂರ ಹಾಗೂ ಸಾಯಂಕಾಲದ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಕ್ಕಳ ಕಲ್ಯಾಣಕ್ಕಾಗಿ ರಾಷ್ಟ್ರಪ್ರಶಸ್ತಿ ವಿಜೇತ, ಮಹೇಶ ಫೌಂಡೇಶನ್‌ನ ಸಂಸ್ಥಾಪಕರು ಮತ್ತು ಅಧ್ಯಕ್ಷರಾದ ಮಹೇಶ ಜಾಧವ ಆಗಮಿಸಲಿದ್ದಾರೆ. ಶಾಲೆಯ ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರು ಮತ್ತು ಸಮಸ್ತ ಸಿಬ್ಬಂದಿ ವರ್ಗದವರು ಸರ್ವರಿಗೂ ಸ್ವಾಗತ ಕೋರಿದ್ದಾರೆ.




---


# ಸರಕಾರಿ ಪ್ರೌಢಶಾಲೆಗೆ ದೇಣಿಗೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಕೆ. ಆರ್. ಕುಲಕರ್ಣಿ ಸರಕಾರಿ ಪ್ರೌಢಶಾಲೆಯ ಕೃಷ್ಣಾಜಿ ಸ್ಮಾರಕ ಭವನಕ್ಕಾಗಿ ಮುಂಬೈನ ಪ್ರಲ್ಹಾದ ಮುಜುಂದಾರ ದಂಪತಿಗಳು 21 ಸಾವಿರ ರೂಪಾಯಿಗಳ ದೇಣಿಗೆಯನ್ನು ನೀಡಿದ್ದಾರೆ ಎಂದು ಮುಖ್ಯ ಶಿಕ್ಷಕ ನಿಡಗುಂದಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಂತೆಯೇ, ಕೋಡಿ ಕೊಪ್ಪದವರಾದ ಜಿಲ್ಲಾ ಖಜಾನೆಯ ಜಿಲ್ಲಾ ಸಹಾಯಕ ನಿರ್ದೇಶಕ ಶಂಕರ ಬಾದನಟ್ಟಿ ಮತ್ತು ಸ್ಥಳೀಯ ಎಲೆಕ್ಟ್ರಿಶಿಯನ್ ಶರಣಪ್ಪ ಹಡಗಲಿ ಇವರು ತಲಾ 11 ಸಾವಿರ ರೂಪಾಯಿಗಳನ್ನು ದೇಣಿಗೆಯಾಗಿ ನೀಡಿದ್ದಾರೆ.

ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷ ಆನಂದರಾವ ಕುಲಕರ್ಣಿ, ಶಾಲಾ ಸಿಬ್ಬಂದಿಯವರು, ಪಟ್ಟಣದ ನಾಗರಿಕರು ದಾನಿಗಳನ್ನು ಅಭಿನಂದಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.









---

# ದಿ. ಕಾಂತಿಲಾಲ ಬನ್ಸಾಲಿಯವರಿಗೆ ಶ್ರದ್ಧಾಂಜಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ನಿಧನರಾದ ಗದಗ ಜಿಲ್ಲೆಯ ಬಿಜೆಪಿಯ ಪ್ರಥಮ ಜಿಲ್ಲಾಧ್ಯಕ್ಷ ಕಾಂತಿಲಾಲ್ ಬನ್ಸಾಲಿಯವರ ಮನೆಗೆ ಭೇಟಿ ನೀಡಿದ ಮಾಜಿ ಶಾಸಕ, ಬಿಜೆಪಿ ಹಿರಿಯ ಮುಖಂಡ ಎಂ.ಡಿ. ಲಕ್ಷ್ಮೀನಾರಾಯಣ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ದಿ. ಕಾಂತಿಲಾಲ್ ಬನ್ಸಾಲಿಯವರು ಗದಗ ಜಿಲ್ಲೆಯಲ್ಲಿ ಬಿಜೆಪಿ ಪಕ್ಷವನ್ನು ಕಟ್ಟಿದ ನಿಷ್ಠಾವಂತ ಕಾರ್ಯಕರ್ತರಾಗಿದ್ದರು. ಅವರ ಅಗಲಿಕೆ ಬಹಳ ನೋವನ್ನುಂಟು ಮಾಡಿದೆ ಎಂದು ಸಾಂತ್ವನ ಹೇಳಿದರು.



ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ರಮೇಶ ಹತ್ತಿಕಾಳ, ಡಿ.ಆರ್. ಟಿಕಾನದಾರ್, ಕುರುಹೀನಶೆಟ್ಟಿ ಸಮಾಜದ ಹಾಗೂ ನೇಕಾರ ಮುಖಂಡರಾದ ಹರೀಶಕುಮಾರ ಹಾಗೂ ಬನಸಾಲಿ ಕುಟುಂಬದವರು ಉಪಸ್ಥಿತರಿದ್ದರು.

# ಮಾಜಿ ಪ್ರಧಾನಿ ಅರ್ಥಶಾಸ್ತ್ರಜ್ಞ ಡಾ. ಮನಮೋಹನ್ ಸಿಂಗ್ ನಿಧನ!

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**



ತೀವ್ರ ಉಸಿರಾಟದ ತೊಂದರೆಯಿಂದ ಬಳಲುತ್ತಿದ್ದ ಮಾಜಿ ಪ್ರಧಾನಿ ಹಾಗೂ ಖ್ಯಾತ ಅರ್ಥಶಾಸ್ತ್ರಜ್ಞ ಮನಮೋಹನ್ ಸಿಂಗ್ ಅವರು ವಿಧಿವಶರಾಗಿದ್ದಾರೆ.

ಅನಾರೋಗ್ಯದ ಹಿನ್ನೆಲೆ ಮನಮೋಹನ್ ಸಿಂಗ್ ಅವರನ್ನು ಗುರುವಾರ ದೆಹಲಿಯ ಏಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ದುರಾದೃಷ್ಟವಶಾತ್ ಚಿಕಿತ್ಸೆ ಫಲಿಸದೇ ರಾತ್ರಿ ಸಾವನ್ನಪ್ಪಿದ್ದಾರೆ.

ಆರೋಗ್ಯ ಹದಗೆಟ್ಟಿದ್ದ ಹಿನ್ನೆಲೆಯಲ್ಲಿ ಗುರುವಾರ ಸಂಜೆ ಸಿಂಗ್ ಅವರನ್ನು ತುರ್ತು ಚಿಕಿತ್ಸಾ ಘಟಕಕ್ಕೆ ಕರೆತರಲಾಗಿತ್ತು. ತೀವ್ರ ಉಸಿರಾಟದ ಸಮಸ್ಯೆಯಿಂದಾಗಿ ಕಾರಣ ಐಸಿಯುನಲ್ಲಿ ಚಿಕಿತ್ಸೆ ಮುಂದುವರಿದಿತ್ತು. ಆದರೆ, ರಾತ್ರಿ ಹೊತ್ತಿಗೆ ಅವರು ಕೊನೆಯುಸಿರೆಳೆದಿದ್ದಾರೆ.

ಮನಮೋಹನ್ ಸಿಂಗ್ ಅವರು 1991–96ರ ಅವಧಿಯಲ್ಲಿ ಪಿವಿ ನರಸಿಂಹರಾವ್ ನೇತೃತ್ವದ ಸರ್ಕಾರದಲ್ಲಿ ದೇಶದ ಹಣಕಾಸು ಸಚಿವರಾಗಿ ಪ್ರಾಮುಖ್ಯತೆಯನ್ನು ಗಳಿಸಿದರು. ಆರ್ಥಿಕತೆಯನ್ನು ಪರಿವರ್ತಿಸುವ ವ್ಯಾಪಕ ಸುಧಾರಣೆಗಳನ್ನು ತಂದಿದ್ದರು.

ಯುಪಿಎಯ ಎರಡು ಅವಧಿಯ ಪ್ರಧಾನಿಯಾಗಿ ಅವರು ಸೇವೆ ಸಲ್ಲಿಸಿದ್ದರು.

**ಸಂತಾಪ** : ಸಚಿವ ಎಚ್.ಕೆ.ಪಾಟೀಲ, ಸಂಸದ ಬಸವರಾಜ ಬೊಮ್ಮಾಯಿ, ಶಾಸಕ ಜಿ.ಎಸ್.ಪಾಟೀಲ, ಸಿ.ಸಿ.ಪಾಟೀಲ, ಚಂದ್ರು ಲಮಾಣಿ, ಮಾಜಿ ಶಾಸಕರಾದ ಡಿ.ಆರ್.ಪಾಟೀಲ, ಬಿ.ಆರ್.ಯಾವಗಲ್, ಗಣ್ಯರಾದ ಅನಿಲ ಮೆಣಸಿನಕಾಯಿ, ಸಿದ್ದನಗೌಡ ಪಾಟೀಲ, ಅಶೋಕ ಮಂದಾಲಿ ಸೇರಿದಂತೆ ಹಲವರು ಸಂತಾಪ ಸೂಚಿಸಿದ್ದಾರೆ.

### ಮಾಗಡಿ ಕೆರೆಯಲ್ಲಿಲ್ಲ ವಿದೇಶಿ ಪಕ್ಷಿಗಳಿಗೆ ಸುರಕ್ಷತೆ । ಮರೀಚಿಕೆಯಾದ ಸ್ವಚ್ಛತೆ

# ನಾಯಿಗಳ ಉದರ ಸೇರುತ್ತಿವೆ ಪಕ್ಷಿಗಳು!

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಮಾಗಡಿ ವಿದೇಶಿ ವಲಸೆ ಪಕ್ಷಿಗಳ ತಾಣವಾಗಿರುವ ಸಂರಕ್ಷಿತ ಕೆರೆಯಲ್ಲಿ ಸಾವಿರಾರು ಸಂಖ್ಯೆಯಲ್ಲಿ ವಿದೇಶಿ ಪಕ್ಷಿಗಳು ಈಗಾಗಲೇ ಆಗಮಿಸಿವೆ. ಆದರೆ, ಈ ತಾಣದಲ್ಲಿ ಸ್ವಚ್ಛತೆಯೊಂದಿಗೆ ಸುರಕ್ಷತೆಯ ಕೊರತೆಯೂ ಎದ್ದು ಕಾಣುತ್ತಿದ್ದು, ಕೆರೆಯ ದಂಡೆಯಲ್ಲಿ ನಾಯಿಯೊಂದು ಪಕ್ಷಿಯನ್ನು ತಿನ್ನುತ್ತಿರುವ ವಿಡಿಯೋ ವೈರಲ್ ಆಗಿರುವುದು ಪಕ್ಷಿ ಪ್ರಿಯರಲ್ಲಿ ಆತಂಕ ಸೃಷ್ಟಿಸಿದೆ.

ಮಾಗಡಿ ಕೆರೆಯ ದಂಡೆಯಲ್ಲಿ ನಾಯಿಯೊಂದು ವಿದೇಶಿ ಪಕ್ಷಿಯನ್ನು ತಿನ್ನುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಕೆರೆಯ ಸುತ್ತಲೂ ಸಾವಿರಾರು ಪಕ್ಷಿಗಳು ವಿಹರಿಸುತ್ತವೆ. ಜೊತೆಗೆ ಕೆರೆಯ ದಂಡೆಯಲ್ಲಿ ಕುಳಿತುಕೊಂಡು ಸಮಯ ಕಳೆಯುವುದು ಸಾಮಾನ್ಯ ದೃಶ್ಯ. ಕೆರೆಯ ಸುತ್ತಲೂ ಪಕ್ಷಿಗಳ ಸುರಕ್ಷತೆಗೆ ಆದ್ಯತೆ ನೀಡುವಲ್ಲಿ ಅರಣ್ಯ ಇಲಾಖೆಯು ವಿಫಲವಾಗುತ್ತಿದೆಯಾ ಎಂಬ ಪ್ರಶ್ನೆ ಸಾರ್ವಜನಿಕರಲ್ಲಿ ಮನೆ ಮಾಡಿದೆ.

ಈ ಹಿಂದೆ ಕೋಟಿಗಟ್ಟಲೇ ಖರ್ಚು ಮಾಡಿ ಸಂರಕ್ಷಿತ ಕೆರೆ ಎಂದು ಗುರುತಿಸಿ, ಪಕ್ಷಿ ಪ್ರಿಯರಿಗೆ ಮತ್ತು ಪಕ್ಷಿಗಳು ವಲಸೆ ಬಂದು ವಾಸಿಸಲು ಅನುಕೂಲವಾಗುವುದಕ್ಕೆ ವಿಶಾಲವಾದ ಕೆರೆಯ




ಸುತ್ತಲೂ ರಸ್ತೆಗೆ ಹೊಂದಿಕೊಂಡಂತೆ ಪೇವರ್ಸ್ ಮತ್ತು ಗ್ರಿಲ್‌ಗಳನ್ನು ಅಳವಡಿಸಲಾಗಿದೆ. ಆದರೆ ಸಮರ್ಪಕ ನಿರ್ವಹಣೆಯ ಕೊರತೆಯಿಂದ ಎಲ್ಲೆಂದರಲ್ಲಿ ಗಿಡಗಂಟಿಗಳು ಬೆಳೆದಿದ್ದು, ಇಷ್ಟು ಖರ್ಚು ಮಾಡಿದ್ದಾದರೂ ಯಾವ ಪುರುಷಾರ್ಥಕ್ಕೆ ಎಂಬ ಪ್ರಶ್ನೆ ಮೂಡಿದೆಯಲ್ಲದೆ, ಸಾರ್ವಜನಿಕರ ತೆರಿಗೆ ಹಣಕ್ಕೆ ಇಲ್ಲಿ ಬೆಲೆ ಇಲ್ಲವೇ ಎಂಬ ಸಂಶಯ ಕಾಡತೊಡಗಿದೆ.

ಕೆರೆಯ ಸುತ್ತಲೂ ಗಿಡಗಂಟಿಗಳ ಜೊತೆ–ಗೆ ಎಲ್ಲೆಂದರಲ್ಲಿ ಗಲೀಜು ಮನೆ ಮಾಡಿದ್ದು, ಪಕ್ಷಿಗಳ ವೀಕ್ಷಣೆಗೆ ಆಗಮಿಸುವ ಪಕ್ಷಿ ಪ್ರಿಯರು ಮೂಗು ಮುಚ್ಚಿಕೊಂಡು ಪಕ್ಷಿ ವೀಕ್ಷಣೆ ಮಾಡಬೇಕಾದ ಅನಿವಾರ್ಯತೆಯಿದೆ. ಸರಕಾರ ಪಕ್ಷಿಗಳ ಹಿತದೃಷ್ಟಿಯಿಂದ ಕೆರೆಯನ್ನು ಸಂರಕ್ಷಿತ ಕೆರೆ ಎಂದು ಘೋಷಿಸಿ, ಸ್ವಚ್ಛತೆ ಇಲ್ಲದೇ ಹೋದರೆ ಹೇಗೆ, ಇದರ ನಿರ್ವಹಣೆಯ ಹೊಣೆ ಯಾರದ್ದು ಎಂಬುದಕ್ಕೆ ಸಂಬಂಧಿಸಿದ ಇಲಾಖಾ ಅಧಿಕಾರಿಗಳೇ ಉತ್ತರಿಸಬೇಕಿದೆ.

ಈ ಕುರಿತು ಪ್ರತಿಕ್ರಿಯಿಸಿದ ವಲಯ ಅರಣ್ಯಾಧಿಕಾರಿ ರಾಮಪ್ಪ ಪೂಜಾರ, ಸುಸ್ತಾಗಿ ಪಕ್ಷಿಯೊಂದು ಮೃತಪಟ್ಟಿದ್ದು, ಅದನ್ನು ನಾಯಿ ತಿನ್ನುತ್ತಿರುವ ವಿಡಿಯೋ ಜಾಲತಾಣಗಳಲ್ಲಿ ಹರಿದಾಡಿದೆ. ಈ ವಿಷಯ ಇಲಾಖೆಯ ಗಮನಕ್ಕೆ ಬಂದಿದ್ದು, ಮುಂದೆ ಈ ರೀತಿ ಆಗದಂತೆ ಕ್ರಮ ವಹಿಸಲಾಗುವುದು ಎಂದರು.

ಮಾಗಡಿ ಗ್ರಾ.ಪಂ ಪಿಡಿಓ ಎಸ್.ವೈ. ಕುಂಬಾರ ಪ್ರತಿಕ್ರಿಯಿಸಿ, ಈ ವಾರದಲ್ಲಿ ಗ್ರಾ.ಪಂ ಹಾಗೂ ಅರಣ್ಯ ಇಲಾಖೆ ಸಹಯೋಗದಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಗುವುದು ಎಂದರು.



ಭಾರತೀಯ ಕಿಸಾನ್ ಸಂಘದ ಜಿಲ್ಲಾ ಪ್ರ.ಕಾರ್ಯದರ್ಶಿ ರಮೇಶ ಕೋಳಿವಾಡ ಪ್ರತಿಕ್ರಿಯಿಸಿ, ಕೆರೆಯ ಸುತ್ತಲೂ ಸ್ವಚ್ಛತೆ ಇಲ್ಲ. ವಲಸೆ ಬರು ಪಕ್ಷಿಗಳಿಗೆ ಸುರಕ್ಷತೆಯೂ ಇಲ್ಲ. ಹೀಗಾಗಿ ನಾಯಿ–ನರಿಗಳಿಗೆ ಪಕ್ಷಿಗಳು ಆಹಾರವಾಗುತ್ತಿವೆ. ಜೊತೆಗೆ ಮಾಂಸಪ್ರಿಯರಿಗೂ ಸಹ ಆಹಾರವಾಗುತ್ತಿವೆ. ಅಧಿಕಾರಿಗಳ ನಿರ್ಲಕ್ಷ್ಯದಿಂದ ದುರ್ವಾಸನೆ ಬೀರುತ್ತಿದೆ. ಇಲ್ಲಿ ಯಾವ ಅಭಿವೃದ್ಧಿ ಕೆಲಸಗಳೂ ಆಗುತ್ತಿಲ್ಲ. ದೂರದಿಂದ ಆಗಮಿಸುವ ಪ್ರವಾಸಿಗರಿಗೆ ಇಲ್ಲಿ ಸರಿಯಾಗಿ ಗೈಡ್ ಮಾಡುವ ವ್ಯವಸ್ಥೆಯೂ ಸಹ ಇಲ್ಲ ಎಂದರು.


### ಶಿಗ್ಲಿ ಗ್ರಾಮದಲ್ಲಿ ಸ್ವಾತಂತ್ರ್ಯ ಯೋಧರ ಭವನ ನಿರ್ಮಾಣಕ್ಕೆ ಗ್ರಾಮಸ್ಥರ ಬೇಡಿಕೆ

# ಬೆಳಗಾವಿ ಕಾಂಗ್ರೆಸ್ ಅಧಿವೇಶನದಲ್ಲಿ ಶಿಗ್ಲಿಯ ಗುರುತು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಸವಿನೆನಪಿಗಾಗಿ ಹಾಗೂ ಸ್ವಾತಂತ್ರ್ಯ ಯೋಧರ ಸ್ಮರಣೆಗಾಗಿ ಶಿಗ್ಲಿ ಗ್ರಾಮದಲ್ಲಿ ಸ್ವಾತಂತ್ರ್ಯ ಯೋಧರ ಭವನ ನಿರ್ಮಾಣ ಮಾಡಬೇಕೆಂಬುದು ಗ್ರಾಮಸ್ಥರ ಬೇಡಿಕೆಯಾಗಿದೆ. ಅದಕ್ಕಾಗಿ ಈಗಾಗಲೇ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದ್ದು, ಸರ್ಕಾರ ಭವನ ನಿರ್ಮಾಣಕ್ಕೆ 1 ಕೋಟಿ ರೂ ಅನುದಾನ ಕಲ್ಪಿಸಬೇಕೆಂದು ಜಿಪಂ ಮಾ.ಜಿ ಅಧ್ಯಕ್ಷ, ನ್ಯಾಯವಾದಿ ಎಸ್.ಪಿ. ಬಳಿಗಾರ ಆಗ್ರಹಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡಿ, ನೂರು ವರ್ಷಗಳ ಹಿಂದೆ ಮಹಾತ್ಮ ಗಾಂಧೀಜಿಯವರು ಅಧ್ಯಕ್ಷತೆ ವಹಿಸಿದ್ದ ಐತಿಹಾಸಿಕ ಬೆಳಗಾವಿ ಕಾಂಗ್ರೆಸ್ ಅಧಿವೇಶನದಲ್ಲಿ ತಾಲೂಕಿನ ಶಿಗ್ಲಿ ಗ್ರಾಮದ ಲಿಂ.ಗುರುಬಸಪ್ಪಜ್ಜ ಯಾಗಂಟಿ ಅವರು ಭಾಗವಹಿಸಿದ್ದರು. ಅಲ್ಲಿಂದ



ಬಂದ ಮೇಲೆ ಗಾಂಧೀಜಿಯವರ ರಾಷ್ಟ್ರೀಯ ವಿಚಾರಧಾರೆಗಳನ್ನು ಜನರಲ್ಲಿ ತುಂಬುತ್ತಾ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಹಚ್ಚಿದ ಪರಿಣಾಮವಾಗಿ ಗ್ರಾಮದಲ್ಲಿ 36ಕ್ಕೂ ಹೆಚ್ಚು ಸ್ವಾತಂತ್ರ್ಯ ಯೋಧರ ಕುಟುಂಬಗಳಿರುವುದು ನಮ್ಮೂರ ಹೆಮ್ಮೆ.

ಬ್ರಿಟೀಷರ ವಿರುದ್ಧ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಹಚ್ಚಿದ ಪರಿಣಾಮವಾಗಿ ಗ್ರಾಮದ ಬಸವಕುಮಾರ ಮುಳಗುಂದಮಠ, ಆದಯ್ಯ ಹಿರೇಮಠ ಮತ್ತಿತರರು ಬ್ರಿಟೀಷರ ವಿರುದ್ಧ ಭಾಷಣ ಮಾಡಿ ಜೈಲು ಸೇರಿದರು. ಬಿಡುಗಡೆಯಾಗಿ ಬಂದ ಮೇಲೆ ಮತ್ತೆ ಗ್ರಾಮದಲ್ಲಿ ಸ್ವಾತಂತ್ರ್ಯ ಯೋಧರ ದೊಡ್ಡ ತಂಡವೇ ಹುಟ್ಟಿಕೊಂಡಿತು. ಸ್ವಾತಂತ್ರ್ಯ ಹೋರಾಟದಲ್ಲಿ ಹುತಾತ್ಮರಾದ



ಹಾವೇರಿಯ ಹೊಸರಿತ್ತಿಯ ಮೈಲಾರ ಮಹಾದೇವಪ್ಪರ ಜೊತೆಯಲ್ಲಿ ಶಿರಹಟ್ಟಿ ತಾಲೂಕಿನ ಕೋಗನೂರಿನ ವೀರಯ್ಯ ಹಿರೇಮಠ, ತಿರಕಪ್ಪ ಮಡಿವಾಳ ಅವರು ಬ್ರಿಟೀಷರ ಗುಂಡಿಗೆ ಬಲಿಯಾದಾಗ ಶಿಗ್ಲಿ ಗ್ರಾಮದಿಂದ ವೀರಭದ್ರಪ್ಪ ಬಿದರಳ್ಳಿ ಅವರ ಜೊತೆಗೆ ಅನೇಕ ಯೋಧರು ಸೆರೆಮನೆ ವಾಸ ಅನುಭವಿಸಿದ್ದರು.

ಇಂದು ಶಿಗ್ಲಿ ಗ್ರಾಮದಲ್ಲಿ ಒಟ್ಟು 36 ಸ್ವಾತಂತ್ರ್ಯ ಯೋಧರ ಕುಟುಂಬಗಳಿದ್ದು ಈ ಬಗ್ಗೆ ಖ್ಯಾತ ಸಾಹಿತಿ ಆರ್.ಎಂ. ಹೊನಕೇರಿ ತಮ್ಮ ಗ್ರಂಥದಲ್ಲಿ ಉಲ್ಲೇಖಿಸಿದ್ದಾರೆ. ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಈ ಸಂದರ್ಭದಲ್ಲಿ ಗ್ರಾಮದ ಎಲ್ಲಾ ಸ್ವಾತಂತ್ರ್ಯ ಯೋಧರ ಸ್ಮರಣೆಗಾಗಿ ಒಂದು ಕೋಟಿ ರೂ ವೆಚ್ಚದಲ್ಲಿ ಸ್ವಾತಂತ್ರ್ಯ ಯೋಧರ ಭವನ ನಿರ್ಮಾಣ ಮಾಡಬೇಕೆಂಬ ಗ್ರಾಮಸ್ಥರ ಮನವಿ ಸರ್ಕಾರ ಸ್ಪಂದಿಸಬೇಕೆಂದು ಬಳಿಗಾರ ತಿಳಿಸಿದ್ದಾರೆ.

ಇಂಡಿ ತಾಲೂಕಿನ ತಾಂಬೆಯಿಂದ ಬಟ್ಟೆ ವ್ಯಾಪಾರಕ್ಕಾಗಿ ಶಿಗ್ಲಿ ಗ್ರಾಮಕ್ಕೆ ಕುಟುಂಬ ಸಮೇತ ರಾಷ್ಟ್ರ ಭಕ್ತರು, ಆಧ್ಯಾತ್ಮಿಕ, ಧಾರ್ಮಿಕ ಪುರುಷರೂ ಆದ ಲಿಂ.ಗುರುಬಸಪ್ಪಜ್ಜ ಯಾಗಂಟಿ ಬಂದು ನೆಲೆಸಿದರು. ಅವರು ಬೆಳಗಾವಿ ಅಧಿವೇಶನಕ್ಕೆ ಹೋಗಿ ಬಂದ ಮೇಲೆ ಶಿಗ್ಲಿ ಗ್ರಾಮದಲ್ಲಿ ಆಶ್ರಮ ಕಟ್ಟಿಕೊಂಡು ಮಡದಿಯೊಂದಿಗೆ ಕಾಯಕ ಹಾಗೂ ಆಧ್ಯಾತ್ಮ ಸಾಧನೆಯಲ್ಲಿ ತೊಡಗಿಸಿಕೊಂಡು ಗ್ರಾಮದ ಜನರಲ್ಲಿ ಗಾಂಧೀಜಿಯವರ ರಾಷ್ಟ್ರೀಯ ವಿಚಾರಧಾರೆಗಳನ್ನು ತುಂಬಿದರು.

# ಯಾರದೋ ದುಡ್ಡು, ಯಲ್ಲಮ್ಮನ ಜಾತ್ರೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಬೆಳಗಾವಿಯಲ್ಲಿ ನಡೆಯುತ್ತಿರುವ ಕಾಂಗ್ರೆಸ್ ಅಧಿವೇಶನದ ಹೆಸರಿನಲ್ಲಿ ರಾಜ್ಯದ ಕಾಂಗ್ರೆಸ್ ಸರ್ಕಾರ ಜನರಿಗೆ ವಂಚನೆ ಮಾಡಿ ಯಾರದೋ ದುಡ್ಡಿನಲ್ಲಿ ಯಲ್ಲಮ್ಮನ ಜಾತ್ರೆ ಮಾಡಿದಂತಿದೆ ಎಂದು ಜಿಲ್ಲಾ ಬಿಜೆಪಿ ವಕ್ತಾರ ಎಂ.ಎಂ. ಹಿರೇಮಠ ಖಂಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಇಂದು ಕಾಂಗ್ರೆಸ್ ಪಕ್ಷ ದೇಶ ವಿರೋಧಿ ಕೆಲಸ ಮಾಡುತ್ತಿದೆ. ಕಾಂಗ್ರೆಸ್ ಪಕ್ಷದ ನಾಯಕ ರಾಹುಲ್ ಗಾಂಧಿ ಪರದೇಶಕ್ಕೆ ಹೋಗಿ ಈ ದೇಶದ ಬಗ್ಗೆ ಅಲ್ಲಸಲ್ಲದ ಮಾತುಗಳನ್ನಾಡಿ



ದೇಶದ ಮರ್ಯಾದೆಯನ್ನು ಕಳೆಯುತ್ತಾ ದೇಶ ವಿರೋಧಿ ಹೇಳಿಕೆಗಳನ್ನು ನೀಡುತ್ತಿದ್ದಾರೆ.

ಕಾಂಗ್ರೆಸ್ ನಾಯಕರಾದ ಸಿದ್ಧರಾಮಯ್ಯ, ಡಿ.ಕೆ.ಶಿ ಮುಂತಾದವರು ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ನಾಯಕರುಗಳಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ಅವರನ್ನು ಮೆಚ್ಚಿಸಲು ರಾಜ್ಯ ಸರ್ಕಾರದ ಹಣವನ್ನು ದುರಪಯೋಗ ಮಾಡುತ್ತಿದ್ದಾರೆ. ಇದು ಜನವಿರೋಧಿ ಮತ್ತು ದೇಶ ವಿರೋಧಿ ಕಾಂಗ್ರೆಸ್ ಆಗಿದೆ ಎಂದು ಟೀಕಿಸಿದ್ದಾರೆ.

ಇನ್ನಾದರೂ ಕಾಂಗ್ರೆಸ್ ಪಕ್ಷ ದೇಶದ ಬಗ್ಗೆ ಚಿಂತನೆಯನ್ನು ಮಾಡಬೇಕು ಹಾಗೂ ಭ್ರಷ್ಟಾಚಾರದ ವಿರುದ್ಧ ಹೋರಾಡಬೇಕೆಂದು ಬಿಜೆಪಿ ಗದಗ ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ, ಸಹ–ವಕ್ತಾರರಾದ ದತ್ತಣ್ಣ ಜೋಶಿ, ಮಾಧ್ಯಮ ಪ್ರಮುಖ ರಾಜು ಹೊಂಗಲ, ಸಹ–ಪ್ರಮುಖ ಶ್ರೀನಿವಾಸ ಹುಬ್ಬಳ್ಳಿ ಒತ್ತಾಯಿಸಿದ್ದಾರೆ.

# ವಿಕಲಚೇತನರ ಪಾಸ್ ಮಾನ್ಯತಾ ಅವಧಿ ವಿಸ್ತರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ವಿಕಲಚೇತನರ ಪಾಸ್ ಹೊಂದಿರುವ ಅಭ್ಯರ್ಥಿಗಳು ತಮ್ಮ ಪಾಸಿನ ಅವಧಿಯು ಡಿಸೆಂಬರ್ 31 ರವರೆಗೆ ಮಾನ್ಯತೆ ಇದ್ದುದನ್ನು 28–2–2025 ರವರೆಗೆ ವಿಸ್ತರಿಸಲಾಗಿದೆ. ಆಯಾ ತಾಲೂಕಾವಾರು ಸಂಬಂಧಿಸಿದ ಘಟಕಗಳಲ್ಲಿ ವಿಕಲಚೇತನರ ಪಾಸುಗಳನ್ನು ಜನವರಿ 17 ರಿಂದ ನವೀಕರಿಸಲಾಗುತ್ತದೆ. ವಿಕಲಚೇತನರ ಪಾಸ್ ಹೊಂದಿರುವ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್ ಮುಖಾಂತರ ಅರ್ಜಿ ಸಲ್ಲಿಸಿ ನಂತರ ಎಲ್ಲ ತಮ್ಮ ಮೂಲ ದಾಖಲಾತಿಗಳ ಝೆರಾಕ್ಸ್ ಪ್ರತಿಗಳೊಂದಿಗೆ ಹಳೆ ಪಾಸನ್ನು ವಾಪಸ್ ನೀಡಿ ನವೀಕರಿಸಲು ನಿಗದಿಪಡಿಸಿದ ನಗದು ಹಣ 660 / ರೂ.ಗಳನ್ನು ಹಾಗೂ 2 ಫೋಟೋಗಳೊಂದಿಗೆ ಸಂಬಂಧಪಟ್ಟ ತಾಲೂಕಾವಾರು ಘಟಕಗಳ ಬಸ್ ನಿಲ್ದಾಣದಲ್ಲಿ ಹೊಸ ಪಾಸನ್ನು ಪಡೆಯುವುದು. ಅದೇ ರೀತಿ ಹೊಸ ಪಾಸುಗಳನ್ನು ಪಡೆಯಲು ವಿಭಾಗೀಯ ಕಚೇರಿ ಗದಗ ವಿಭಾಗ ಇಲ್ಲಿ ಪಡೆಯಲು ವಾ.ಕ. ರ.ಸಾ.ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿ.27 ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ, ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ, ವಾರ್ತಾ ಇಲಾಖೆ, ಹಾಗೂ ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಇವರ ಸಂಯುಕ್ತ ಆಶ್ರಯದಲ್ಲಿ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮಹಾವಿದ್ಯಾಲಯದ ಎ.ಸಿ.ಆಡಿಟೋರಿಯಂ ಹಾಲ್‌ನಲ್ಲಿ (ಎ.ಸಿ. ಲೆಕ್ಚರ್ಸ್ ಹಾಲ್) ಡಿಸೆಂಬರ್ 27 ರಂದು ಮಧ್ಯಾಹ್ನ 2.30 ಗಂಟೆಗೆ ರಾಷ್ಟ್ರೀಯ ಗ್ರಾಹಕರ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಗೋವಿಂದರಡ್ಡಿ ಉದ್ಘಾಟಿಸುವರು. ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಎ.ಜಿ. ಮಾಲ್ದಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ.ಪಲ್ಲೇದ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಶ್ರೀಮತಿ ಯಶೋಧಾ ಪಾಟೀಲ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ನಿರ್ದೇಶಕರಾದ ಡಾ.ಬಸವರಾಜ್ ಬೊಮ್ಮನಹಳ್ಳಿ , ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಂ.ಐ. ಹಿರೇಮನಿ ಪಾಟೀಲ ಆಗಮಿಸುವರು.

CAOCVO (ಕೋ ಆರ್ಡಿನೇಟೆಡ್ ಆ್ಯಕ್ಷನ್ ಆಫ್ ಕನ್ಸೂಮರ್ ಆ್ಯಂಡ್ ವಾಲೆಂಟರಿ ಆರ್ಗನೈಸೇಷನ್ ಆಫ್ ಕರ್ನಾಟಕ) ದ ಸಂಸ್ಥಾಪಕರಾದ ಸೋಮಶೇಖರ ವಿ.ಕೆ. ಹಾಗೂ ಸೈಬರ್ ಕ್ರೈಮ್ ದ ಜಿಲ್ಲಾ ಉಪ ಪೊಲೀಸ್ ಅಧೀಕ್ಷಕರಾದ ಮಹಾಂತೇಶ ಸಜ್ಜನ ಉಪನ್ಯಾಸ ನೀಡುವರು.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಜಿಲ್ಲಾ ಅಂಕಿತ ಅಧಿಕಾರಿ ಡಾ. ವಿಜಯ ಕಂಠಿ , ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ ಹೆಗ್ಗಳಗಿ, ಕಾನೂನು ಮಾಪನ ಶಾಸ್ತ್ರ, ಇಲಾಖೆಯ ಸಹಾಯಕ ನಿಯಂತ್ರಕರಾದ ಎಸ್.ಎಂ. ಬುರಾನಪೂರ ಸ್ವಾಗತ ಕೋರಿದ್ದಾರೆ.

### ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ ಕಡಲೆ ಬೆಳೆಯಲ್ಲಿ ಟ್ರ್ಯಾಕ್ಟರ್ ಚಾಲಿತ ಬೂಮ್ ಸ್ಪ್ರೇಯರ್ ಯಂತ್ರದ ಪ್ರಾತ್ಯಕ್ಷಿಕೆ

# ರೈತರು ಆಸಕ್ತಿಯಿಂದ ಕೃಷಿಯಲ್ಲಿ ತೊಡಗಿಸಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕೃಷಿ ಇಲಾಖೆಯಿಂದ ಗುರುವಾರ ಲಕ್ಷ್ಮೇಶ್ವರದ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ ಕಡಲೆ ಬೆಳೆಯಲ್ಲಿ ಟ್ರ್ಯಾಕ್ಟರ್ ಚಾಲಿತ ಬೂಮ್ ಸ್ಪ್ರೇಯರ್ ಯಂತ್ರದ ಪ್ರಾತ್ಯಕ್ಷತೆಯನ್ನು ಯುವ ರೈತ ಮಲ್ಲಿಕಾರ್ಜುನ ಕಳಸಾಪುರ ಅವರು ಬೆಳೆದ ಬಿಜಿಡಿ 111–1 ತಳಿಯ ಕಡಲೆ ಬೆಳೆಯ ಜಮೀನಿನಲ್ಲಿ ಮಾಡಲಾಯಿತು.

ಈ ವೇಳೆ ಮಾತನಾಡಿದ ಉಪಕೃಷಿ ನಿರ್ದೇಶಕರಾದ ಸ್ಫೂರ್ತಿ ಜಿ.ಎಸ್, ಕೃಷಿ ಒಂದು ವಿಜ್ಞಾನವಾಗಿದ್ದು, ರೈತರು ಆಸಕ್ತಿಯಿಂದ ಕೃಷಿಯಲ್ಲಿ ತೊಡಗಿಸಿಕೊಳ್ಳಬೇಕು. ರೈತರು ಕೃಷಿಯನ್ನು ಲಾಭದಾಯಕವಾಗಿಸಿಕೊಳ್ಳಲು ಹೊಸ ಆವಿಷ್ಕಾರದ ಯಂತ್ರೋಪಕರಣ, ತಂತ್ರಜ್ಞಾನ, ಸಂಶೋಧನಾ ತಳಿಯ ಬೀಜ, ಇತ್ತೀಚಿನ ದ್ರವರೂಪದ ಗೊಬ್ಬರ, ಸಸ್ಯ ಸಂರಕ್ಷಣಾ ಔಷಧಿ ಅಳವಡಿಸಿಕೊಳ್ಳಲೇಬೇಕು. ಮೊದಲಿನಂತೆ 50 ಕೆಜಿ ಚೀಲದ ಬದಲಾಗಿ ದ್ರವರೂಪದ ಯೂರಿಯಾ, ಡಿಎಪಿ ಇತರೇ ಪೋಷಕಾಂಶಗಳನ್ನು ನೇರವಾಗಿ ಎಲೆಗಳ ಮೂಲಕ ಬೆಳೆಗಳಿಗೆ ಸಿಂಪರಣೆ ಮಾಡಬೇಕು. ಇದರಿಂದ ಖರ್ಚುವೆಚ್ಚ, ಆಳಿನ ಸಮಸ್ಯೆ ನಿವಾರಣೆ, ಸಕಾಲಿಕ ಸಿಂಪರಣೆ ಹಾಗೂ ಸಮಯ ಉಳಿತಾಯದ ಜತೆಗೆ ಉತ್ತಮ ಆದಾಯ



ಹೊಂದಬಹುದಾಗಿದೆ ಎಂದರು.

ಅದಕ್ಕಾಗಿ ಕೃಷಿ ಇಲಾಖೆಯ ಮೂಲಕ ರೈತರಿಗೆ ಸಬ್ಸಿಡಿ ದರ (ರೈತರ ವಂತಿಕೆ 41500 ರೂ) ದಲ್ಲಿ ಟ್ರ್ಯಾಕ್ಟರ್ ಚಾಲಿತ ಬೂಮ್ ಸ್ಪ್ರೇಯರ್ ಯಂತ್ರವನ್ನು ಕೊಡಲಾಗುತ್ತದೆ. ಮುಂಬರುವ ದಿನಗಳಲ್ಲಿ ಬೂಮ್ ಸ್ಪ್ರೇಯರ್ ಅನಕೂಲಕ್ಕಾಗಿ ಟ್ರ್ಯಾಕ್ಟರ್‌ಗೆ ಚಿಕ್ಕದಾದ ಟೈರ್ ಗಾಲಿಗಳನ್ನು ಕೊಡಲಾಗುತ್ತದೆ. ಅಲ್ಲದೇ ಈಗ ಅರ್ಜಿ ಸಲ್ಲಿಸಿದ ಅರ್ಹ ಎಲ್ಲ ರೈತರಿಗೂ ಸ್ಪ್ರಿಂಕ್ಲರ್ ಸೆಟ್, ಪಿವಿಸಿ ಪೈಪ್ ಇತರೇ ಯಂತ್ರೋಪಕರಣಗಳನ್ನು ಸಬ್ಸಿಡಿ ದರದಲ್ಲಿ ಕೊಡಲಾಗುತ್ತಿದೆ. ಎಲ್ಲ ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು. ಈ ಬಗ್ಗೆ ಕೃಷಿ ಸಖಿಯರು, ವಿದ್ಯಾವಂತ ರೈತರು ರೈತರಿಗೆ ತಿಳಿಸಬೇಕು ಎಂದರು.

ಸಹಾಯಕ ಕೃಷಿ ಅಧಿಕಾರಿ ರೇವಣಪ್ಪ ಮನಗೂಳಿ ಮಾತನಾಡಿ, ಪ್ರಸಕ್ತ ಹಿಂಗಾರು ಹಂಗಾಮಿನ ಬೆಳೆ ವಿವರವನ್ನು ದಾಖಲಿಸಲು ಮೊಬೈಲ್ ಆ್ಯಪ್ ಮೂಲಕ ರೈತರಿಂದಲೇ ಸ್ವಯಂ ಹಾಗೂ ಖಾಸಗಿ ವ್ಯಕ್ತಿಯಿಂದ ಬೆಳೆ ಸಮೀಕ್ಷೆ ಕಾರ್ಯಕ್ಕೆ ಅವಕಾಶ ಕಲ್ಪಿಸಲಾಗಿದೆ. ಬೆಳೆ ವಿಮೆ, ಬೆಳೆ ನಷ್ಟ ಪರಿಹಾರ, ಬೆಂಬಲ ಬೆಲೆ, ಕೃಷಿ ಸಾಲ ಸೌಲಭ್ಯ ಮತ್ತು ಸರ್ಕಾರದ ವಿವಿಧ ಯೋಜನೆಗಳನ್ನು ಪಡೆಯಲು ಬೆಳೆ ದೃಢೀಕರಣ ಉತಾರ ಅಗತ್ಯವಾಗಿದೆ ಎಂದರು.

ಈ ವೇಳೆ ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಆತ್ಮಾ ಯೋಜನೆಯ ಮಹಾಬಲೇಶ್ವರ ಪೂಜಾರ, ದೇವರಾಜ ಅಚಲಕರ, ರೈತ ಮುಖಂಡರಾದ ಪುಲಕೇಶಪ್ಪ ಬಟ್ಟೂರ, ಟಾಕಪ್ಪ ಸಾತಪುತೆ, ಕರಿಯಪ್ಪ ಹುರಕನವರ, ರಮೇಶ ಕೋಳಿವಾಡ, ದಿಳ್ಳೆಪ್ಪ ಉಳ್ಳಟ್ಟಿ, ಬಸವರಾಜ ಕುರಬರ, ನಿಂಗಪ್ಪ ಶಿವಬಸಣ್ಣವರ, ಗಂಗಪ್ಪ ಅಡರಕಟ್ಟಿ, ಸೋಮಶೇಖರ ಜಬಡಿ, ಬಸವರಾಜ ಮೆಣಸಿನಕಾಯಿ, ವಿರೂಪಾಕ್ಷ ಆದಿ,ಬಸವರಾಜ ಅಣ್ಣಿಗೇರಿ, ಲಕ್ಷ್ಮೇಶ್ವರ ತಾಲೂಕಿನ ಕೃಷಿ ಸಖಿಯರು, ಕೃಷಿ ಪರಿಕರ ವಿತರಕರು, ಕೃಷಿ ಇಲಾಖೆ ಸಿಬ್ಬಂದಿ ಪಾಲ್ಗೊಂಡಿದ್ದರು.

ನಿವೃತ್ತ ಕೃಷಿ ವಿಜ್ಞಾನಿ ಸಂಗನಗೌಡ ಆದಾಪುರ ಮಾತನಾಡಿ, ಕಡಲೆ ಬೆಳೆ ಗದಗ ಜಿಲ್ಲೆಯ ಹಿಂಗಾರಿನ ಸಾಂಪ್ರದಾಯಿಕ ಮತ್ತು ವಾಣಿಜ್ಯ ಬೆಳೆಯಾಗಿದ್ದರೂ ಇತ್ತೀಚಿನ ದಿನಗಳಲ್ಲಿ ಎಕರೆಗೆ ಜಿಲ್ಲೆಯ ಸರಾಸರಿ ಇಳುವರಿ ಕೇವಲ ಒಂದೂವರೆ ಕ್ವಿಂಟಲ್ ಮಾತ್ರ. ಮಣ್ಣಿನಲ್ಲಿ ಸೇರಿಕೊಂಡಿರುವ ಶಿಲೀಂದ್ರಗಳಿಂದ ಕಡಲೆ ಬೆಳೆಗೆ ಸೊರಗು/ಸಿಡಿ ರೋಗಬಾಧೆ, ವ್ಯತಿರಿಕ್ತ ಹವಾಮಾನ ಇದಕ್ಕೆ ಕಾರಣವಾಗಿದೆ. ಆದ್ದರಿಂದ ಕಡಲೆ ಬೆಳೆಯುವ ರೈತರು ತಪ್ಪದೇ ಮಾಗಿ ಉಳುಮೆ, ಮಣ್ಣು ಪರೀಕ್ಷೆ, ಹೊಸ ತಳಿತಯ ಬೀಜ, ಕಡ್ಡಾಯ ಬೀಜೋಪಚಾರ, ಬೆಳೆ ಬದಲಾವಣೆಯಂತಹ ಕ್ರಮಗಳನ್ನು ಅನುಸರಿಸಲೇಬೇಕು. ಲಕ್ಷ್ಮೇಶ್ವರದ ರೈತ ಕಳಸಾಪುರ ಅವರು ಬೆಳೆ ಬದಲಾವಣೆ, ಮಣ್ಣಿನ ಫಲವತ್ತತೆ ಹೆಚ್ಚಿಸುವುದು, ಬಿಜೋಪಚಾರ, ಸಕಾಲಿಕ ಔಷಧೋಪಚಾರದೊಂದಿಗೆ ಧಾರವಾಡ ವಿವಿಯ ಬಿಜಿಡಿ 111–1 ತಳಿತ ಕಡಲೆ ಬೀಜ ಬಿತ್ತನೆ ಮಾಡಿದ್ದು ಸೊರಗು ರೋಗ(5%) ಕಡಿಮೆ ಬಾಧಿತವಾಗಿದೆ ಮತ್ತು ಉತ್ತಮ ಇಳುವರಿ ನಿರೀಕ್ಷಿಸುವಂತಿದೆ ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka